# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 293 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 13–06–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 293 | Title- Code: KARKAN 28269 | Chitradurga | Date: 13-06-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಬಾಲಕಾರ್ಮಿಕ ಪದ್ಧತಿ ತೊಲಗಿಸಲು ಕಾರ್ಮಿಕ ಇಲಾಖೆಯೊಂದಿಗೆ ಸಹಕರಿಸಿ 2

ಚಿತ್ರದುರ್ಗ ಜಿಲ್ಲೆಯ ರೆಡ್‌ಕ್ರಾಸ್ ಸಂಸ್ಥೆಗೆ ಅತಿ ಶೀಘ್ರದಲ್ಲಿ ನಿವೇಶನ: ಜಿಲ್ಲಾಧಿಕಾರಿ 3

ರೇಣುಕಾಸ್ವಾಮಿ ಕುಟುಂಬಕ್ಕೆ ನೂತನ ಸಂಸದ ಕಾರಜೋಳ ಸಾಂತ್ವನ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

### ನಟ ದರ್ಶನ್ ಮತ್ತವರ ಗ್ಯಾಂಗ್‌ಗೆ ಕಠಿಣ ಶಿಕ್ಷೆ ವಿಧಿಸುವಂತೆ ವಿವಿಧ ಸಂಘಟನೆಗಳಿಂದ ಪ್ರತಿಭಟನೆ

# ನಟ ದರ್ಶನ್ ವಿರುದ್ಧ ಜನಾಕ್ರೋಶ

» ಚಿತ್ರದುರ್ಗ

ಚಿತ್ರದುರ್ಗದ ಯುವಕ ರೇಣುಕಾಸ್ವಾಮಿಯನ್ನು ಅಮಾನುಷವಾಗಿ ಕೊಲೆಗೈದಿರುವ ಚಾಲೆಂಜಿಂಗ್ ಸ್ಟಾರ್ ದರ್ಶನ್ ಮತ್ತು ಗ್ಯಾಂಗ್‌ಗೆ ಕಠಿಣ ಶಿಕ್ಷೆ ವಿಧಿಸುವಂತೆ ವಿವಿಧ ಸಂಘಟನೆಗಳಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ನಟ ದರ್ಶನ್ ಮತ್ತವರ ಗ್ಯಾಂಗ್ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ದರ್ಶನ್ ಎರಡನೆ ಪತ್ನಿ ಪ್ರೀತಂಗೌಡಗೆ ಅಶ್ಲೀಲ ಸಂದೇಶ ಕಳಿಸುತ್ತಿದ್ದನೆಂಬ ಕಾರಕ್ಕಾಗಿ ರೇಣುಕಾಸ್ವಾಮಿಯನ್ನು ಬೆಂಗಳೂರಿಗೆ ಕರೆದುಕೊಂಡು ಹೋಗಿ ಕ್ರೂರವಾಗಿ ಹೊಡೆದು ಸಾಯಿಸಿರುವುದನ್ನು ನೋಡಿದರೆ ಎಂತಹವರಿಗೂ ಮನ ಕರಗುತ್ತದೆ. ಅಶ್ಲೀಲ ಸಂದೇಶ ಕಳಿಸುತ್ತಿದ್ದರೆ ಕಾನೂನು ರೀತಿಯ ಕ್ರಮ ಕೈಗೊಳ್ಳಬಹುದಿತ್ತು. ಇಲ್ಲವೇ ಅವರ ಮನೆಯ ಹಿರಿಯರ ಗಮನಕ್ಕೆ ತರಬಹುದಿತ್ತು. ಇದ್ಯಾವುದನ್ನು ಮಾಡದೆ ಏಕಾಏಕಿ ಮರ್ಡರ್ ಮಾಡಿರುವುದು ದುಃಖಕರ ಸಂಗತಿ. ಗೃಹ ಸಚಿವ ಡಾ.ಜಿ.ಪರಮೇಶ್ವರ್ ತನಿಖೆ ನಡೆಸೋಣ ಎಂದು ಹೇಳುತ್ತಿರುವುದರಲ್ಲಿ ಅರ್ಥವಿಲ್ಲ. ದರ್ಶನ್ ಮತ್ತವರ ಗ್ಯಾಂಗ್‌ಗೆ ಗಲ್ಲು ಶಿಕ್ಷೆಯಾಗಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಬೇಕಾಗುತ್ತದೆಂದು ಎಚ್ಚರಿಸಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ ವಿಕೃತ ಮನಸ್ಸಿನ ನಟ ದರ್ಶನ್ ಚಿತ್ರದುರ್ಗದ ರೇಣುಕಾಸ್ವಾಮಿಯನ್ನು ಅಮಾನುಷವಾಗಿ ಹತ್ಯೆಗೈದಿರುವುದು ಅವರ ಕುಟುಂಬಕ್ಕೆ ಬರ ಸಿಡಿಲು ಬಡಿದಂತಾಗಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿರುವುದರಿಂದ ಮೇಲಿಂದ ಮೇಲೆ ಇಂತಹ ಘಟನೆಗಳು ಮರುಕಳಿಸುತ್ತಿವೆ. ರಾಜ್ಯ ಸರ್ಕಾರ ಎಚ್ಚೆತ್ತುಕೊಂಡು ತನಿಖೆಯನ್ನು ಸಿ.ಬಿ.ಐ.ಗೆ ವಹಿಸಿ ರೇಣುಕಾಸ್ವಾಮಿ ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಮಾಜಿ ಶಾಸಕ ಎಸ್.ಕೆ.ಬಸವರಾಜನ್ ಮಾತನಾಡುತ್ತ ರೇಣುಕಾಸ್ವಾಮಿಯನ್ನು ಕೊಲೆಗೈದಿರುವ ನಟ ದರ್ಶನ್ ಮತ್ತವರ ಗ್ಯಾಂಗ್ ಯಾವುದೇ ರೀತಿಯಲ್ಲಿ ತಪ್ಪಿಸಿಕೊಳ್ಳಬಾರದು. ರಾಜ್ಯ ಸರ್ಕಾರ ರಕ್ಷಣೆ ಮಾಡಿದಂತೆ ಕಾಣುತ್ತಿದೆ. ನಟ ದರ್ಶನ್‌ಗೆ ಹುಚ್ಚು ಅಭಿಮಾನಿಗಳು ಇರುವುದರಿಂದ ಈ ರೀತಿಯ ವಿಕೃತಿಗಳು ನಡೆಯುತ್ತಿವೆ. ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕೆಂದು ಆಗ್ರಹಿಸಿದರು.

ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಉಪಾಧ್ಯಕ್ಷ ನಾಗರಾಜ್ ಸಂಗಮ್ ಮಾತನಾಡಿ ನಟ ದರ್ಶನ್ ಮೇಲೆ ಈಗಾಗಲೇ ಸಾಕಷ್ಟು ದೂರು ಆಪಾದನೆಗಳಿವೆ. ರಾಜ್ಯ ಸರ್ಕಾರ ಸರ್ಕಾರ ರಕ್ಷಿಸಲು ಹೊರಟಂತಿದೆ. ಸಿ.ಬಿ.ಐ.ಗೆ ವಹಿಸಿ ತನಿಖೆಗೆ ಆದೇಶಿಸಿದರೆ ನಿಜಾಂಶ ಬಯಲಿಗೆ ಬರುತ್ತದೆ. ಈಗಲಾದರು ದರ್ಶನ್ ಹುಚ್ಚಭಿಮಾನಿಗಳು ಎಚ್ಚೆತ್ತುಕೊಂಡು ಹೊರಬರಬೇಕು. ನಿಸ್ಪಕ್ಷಪಾತ ತನಿಖೆ ನಡೆಸಿ ನೊಂದಿರುವ ಕುಟುಂಬಕ್ಕೆ ನ್ಯಾಯ ಕೊಡಬೇಕೆಂದು ವಿನಂತಿಸಿದರು.





ನಗರಸಭೆ ಮಾಜಿ ಅಧ್ಯಕ್ಷೆ ಸುನಿತಾ ಮಲ್ಲಿಕಾರ್ಜುನ್, ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಕೆ.ಎಂ.ವೀರೇಶ್, ಛಲವಾದಿ ಗುರುಪೀಠದ ಬಸವನಾಗಿದೇವಸ್ವಾಮಿ, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಮಲ್ಲಿಕಾರ್ಜುನಸ್ವಾಮಿ, ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಕಾರ್ಯದರ್ಶಿ ಡಿ.ಟಿ.ಶಿವಾನಂದ್, ಜೆಡಿಎಸ್. ಮಹಿಳಾ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಗೀತ, ಮರುಳಾರಾಧ್ಯ, ರೇಣುಕಾರಾಧ್ಯ, ಭಜರಂಗದಳದ ಪ್ರಭಂಜನ್, ರುದ್ರೇಶ್, ಸಿದ್ದೇಶ್, ವೀರಶೈವ ಲಿಂಗಾಯಿತ ಸಮಾಜದ ಮುಖಂಡರು, ದಲಿತ ಸಂಘಟನೆಗಳ ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲಾಸ್ಪತ್ರೆಯಲ್ಲಿ ಕ್ಯಾನ್ಸರ್ ತಪಾಸಣಾ ಕ್ಲಿನಿಕ್ ಶುರು

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ದಾವಣಗೆರೆ ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ ಹಾಗೂ ಚಿತ್ರದುರ್ಗ ಜಿಲ್ಲಾ ಸರ್ಕಾರಿ ಆಸ್ಪತ್ರೆ ಸಂಯುಕ್ತಾಶ್ರಯದಲ್ಲಿ ಕ್ಯಾನ್ಸರ್ ತಪಾಸಣಾ ಕ್ಲಿನಿಕ್ ಪ್ರಾರಂಭಿಸಲಾಗಿದೆ. ಪ್ರತಿ ಸೋಮವಾರ ಮತ್ತು ಶುಕ್ರವಾರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ತಜ್ಞರೊಂದಿಗೆ ಉಚಿತ ಸಮಲೋಚನೆ ಇರುತ್ತದೆ. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ಜೂನ್ 15ರಂದು ಉದ್ಯೋಗ ಮೇಳ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ಜೂನ್ 15ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆರವರೆಗೆ ಮಿನಿ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ. ಉದ್ಯೋಗ ಮೇಳದಲ್ಲಿ 8ಕ್ಕೂ ಹೆಚ್ಚಿನ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಪುರುಷ, ಮಹಿಳಾ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಾಗುವುದು. ಎಸ್‌ಎಸ್‌ಎಲ್‌ಸಿ, ಪಿ.ಯು.ಸಿ, ಡಿಪ್ಲಮೋ, ಐಟಿಐ, ಯಾವುದೇ ವಿಷಯದಲ್ಲಿ ಪದವಿ ಪಡೆದ 18 ರಿಂದ 30 ವರ್ಷದೊಳಗಿನ ಆಸಕ್ತ ಅಭ್ಯರ್ಥಿಗಳು ತಮ್ಮ 5 ಪ್ರತಿ ಬಯೋಡಾಟಾ, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು, ಭಾವಚಿತ್ರ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಹಾಜರಾಗಬೇಕು. ಹೆಚಿನ ಮಾಹಿತಿಗಾಗಿ ಚಿತ್ರದುರ್ಗ ನಗರದ ಹಳೇ ವೈಶಾಲಿ ಗೇಟ್ ಹತ್ತಿರದ ಸ್ಟೇಡಿಯಂ ತಿರುವುನಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 7022459064, 8105619020, 9945587060 ಗೆ ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್‌ಎಸ್‌ಎಲ್‌ಸಿ ಪರೀಕ್ಷೆ-2: ನಿಷೇಧಾಜ್ಞೆ



» ಚಿತ್ರದುರ್ಗ

ಜೂನ್ 14 ರಿಂದ ಜೂನ್ 22 ರ ವರಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ನಡೆಯಲಿರುವ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಆದೇಶಿಸಿದ್ದಾರೆ. ಜಿಲ್ಲಾದ್ಯಂತ 19 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಪರೀಕ್ಷೆ ನಡೆಯುವ ದಿನಾಂಕಗಳಂದು ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶದಲ್ಲಿ ಕಲಂ 144 ಸೆಕ್ಷನ್ ಜಾರಿ ಮಾಡಿ ನಿಷೇದಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷೆ ನಡೆಯುವ ಎಲ್ಲಾ ಕೇಂದ್ರಗಳ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ, ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ತೆರೆಯುವಂತಿಲ್ಲ. ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಅಥವಾ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರಲು ಅವಕಾಶವಿಲ್ಲ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ.

## ಪ್ರಮುಖ ಸುದ್ದಿ

# ರೇಣುಕಾಸ್ವಾಮಿ ನಿವಾಸದಲ್ಲಿ ಸ್ಮಶಾನ ಮೌನ?

» ಚಿತ್ರದುರ್ಗ

ಚಿತ್ರನಟದರ್ಶನ್‌ಮತ್ತುಆತನಗ್ಯಾಂಗ್‌ನಿಂದ ಕೊಲೆಗೀಡಾದ ರೇಣುಕಾಸ್ವಾಮಿಯ ಚಿತ್ರದುರ್ಗ ನಿವಾಸದಲ್ಲಿ ಸ್ಮಶಾನ ಮೌನ ಆವರಿಸಿದೆ. ನಟ ದರ್ಶನ್ ಮತ್ತು ಆತನ ಗ್ಯಾಂಗ್ ನಡೆಸಿದ ಹಲ್ಲೆಯಿಂದಾಗಿ ಕೊಲೆಗೀಡಾಗಿರುವ ರೇಣುಕಾಸ್ವಾಮಿ ಚಿತ್ರದುರ್ಗ ಮೂಲದವರಾಗಿದ್ದು, ಸ್ಥಳೀಯ ಮೆಡಿಕಲ್ ಸ್ಟೋರ್‌ವೊಂದರಲ್ಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದರು ಎನ್ನಲಾಗಿದೆ. ಕೆಇಬಿ ನಿವೃತ್ತ ನೌಕರನ ಮಗನಾಗಿರುವ ರೇಣುಕಾಸ್ವಾಮಿ, ತಂದೆ–ತಾಯಿ, ಪತ್ನಿ ಮತ್ತು ಸಹೋದರಿ ಹಾಗೂ ಅಪಾರ ಬಂಧು–ಬಳಗವನ್ನು ಹೊಂದಿರುವ ರೇಣುಕಾಸ್ವಾಮಿ, ಚಿತ್ರನಟ ದರ್ಶನ್ ಅಭಿಮಾನಿಯೂ ಕೂಡ ಆಗಿದ್ದರು. ದರ್ಶನ್ ಕುಟುಂಬದ ಬಿರುಕು ಸರಿಪಡಿಸಲು ಹೋಗಿ, ಪವಿತ್ರ ಗೌಡ ಎಂಬುವವರಿಗೆ ವಾಟ್ಸಾಪ್ ಮೂಲಕ ಮೆಸೇಜ್ ಹಾಕಿದ್ದರು ಎಂಬ ಕಾರಣಕ್ಕೆ ದರ್ಶನ್ ಮತ್ತು ಆತನ ಬೆಂಬಲಿಗರು ಬೆಂಗಳೂರಿಗೆ ಕರೆಸಿಕೊಂಡು ಮಾರಣಾಂತಿಕವಾಗಿ ಹಲ್ಲೆ ನಡೆಸಿ, ಕೊಲೆಮಾಡಿದ್ದಾರೆ ಎನ್ನಲಾಗಿದೆ. ಕೊಲೆಗೀಡಾದ ರೇಣುಕಾಸ್ವಾಮಿಯ ದೇಹವನ್ನು ಕೆಂಗೇರಿ ಸಮೀಪದ ಮೋರಿಯೊಂದರಲ್ಲಿ ಬಿಸಾಕಿ ಹೋಗಿದ್ದು, ಸೋಮವಾರ ಬೆಳಿಗ್ಗೆ ಅಷ್ಟೇ ನಾಯಿಗಳು ಎಳೆತಂದ ಕಾರಣಕ್ಕೆ ರೇಣುಕಾಸ್ವಾಮಿ ಮೃತ ದೇಹ ಎಂದು ಗುರುತಿಸಿರುವ ಬೆಂಗಳೂರು ಅನ್ನಪೂರ್ಣೇಶ್ವರಿ ನಗರ ಪೊಲೀಸರು ದೂರು ದಾಖಲಿಸಿಕೊಂಡು ಮೊಬೈಲ್ ಕರೆಗಳನ್ನು ಟ್ರಾಪ್ ಮಾಡಲಾಗಿದ್ದು, ದರ್ಶನ್ ಸೇರಿ ಹನ್ನೊಂದು ಜನರನ್ನು ಬಂಧಿಸಿರುವ ಅನ್ನಪೂರ್ಣೇಶ್ವರಿ ನಗರ ಪೊಲೀಸರು ಕೊಲೆ ಕೇಸು ದಾಖಲಿಸಿ, ನ್ಯಾಯಾಲಯಕ್ಕೆ ಆರೋಪಿಗಳನ್ನು ಹಾಜರುಪಡಿಸಿದ್ದರು.

ನಟ ದರ್ಶನ ಮತ್ತು ಗ್ಯಾಂಗ್‌ನಿಂದ ಕೊಲೆಗೀಡಾದ ರೇಣುಕಾಸ್ವಾಮಿ ಕೆಇಬಿ



ನಿವೃತ್ತ ನೌಕರರೊಬ್ಬರ ಮಗನಾಗಿದ್ದು, ಉತ್ತಮವಾಗಿ ಜೀವನ ನಡೆಸುತ್ತಿದ್ದರು. ಸ್ಥಳೀಯ ಮೆಡಿಕಲ್ ಸ್ಟೋರ್‌ವೊಂದರಲ್ಲಿ ಕೆಲಸ ಮಾಡುತ್ತಿದ್ದ ರೇಣುಕಾಸ್ವಾಮಿ ಸಹಜವಾಗಿ ಚಿತ್ರನಟ ದರ್ಶನ್ ಅವರ ಅಭಿಮಾನಿಯೂ ಆಗಿದ್ದರು. ಕಳೆದ ವರ್ಷ ಜೂನ್ 28ಕ್ಕೆ ವಿವಾಹವಾಗಿದ್ದ ರೇಣುಕಾಸ್ವಾಮಿ ಆರು ತಿಂಗಳ ಗರ್ಭಿಣಿ ಪತ್ನಿಯನ್ನು ಬಿಟ್ಟು ಹೋಗಿರುವುದು ಇಡೀ ಸಂಬಂಧಿಕರಲ್ಲಿ ತೀವ್ರ ಆತಂಕಕ್ಕೆ ಈಡುಮಾಡಿದ್ದು, ಸಂಬಂಧಿಕರು ಮತ್ತು ಕುಟುಂಬದಲ್ಲಿ ಸ್ಮಶಾನ ಮೌನವೇ ಆವರಿಸಿದೆ.

ಕೊಲೆಗೀಡಾದ ರೇಣುಕಾಸ್ವಾಮಿಯ ನಿವಾಸದ ಬಳಿ ವೀರಶೈವ ಲಿಂಗಾಯಿತ ಸಮಾಜದ ಮುಖಂಡರಾದ ಕೆ.ಎಂ.ವಿರೇಶ್, ಷಡಾಕ್ಷರಯ್ಯ ಸ್ವಾಮಿ ಸೇರಿದಂತೆ ಹಲವು ಜನ ವೀರಶೈವ ಲಿಂಗಾಯಿತರು ಜಮಾವಣೆಗೊಂಡಿದ್ದು, ನಟ ದರ್ಶನ ಮತ್ತು ಗ್ಯಾಂಗ್ ವಿರುದ್ಧ ತೀವ್ರ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಕಾನೂನು ಕೈಗೆತ್ತಿಕೊಂಡಿರುವ ದರ್ಶನ್ ಅವರನ್ನು ಆರೋಪಿ ನಂ:1 ಎಂದು ಗುರುತಿಸಿ, ಮತ್ತು ಆತನ ಗ್ಯಾಂಗ್‌ನ್ನು ಕೊಲೆಗಡುಕರ ಗ್ಯಾಂಗ್ ಎಂದು ಪರಿಗಣಿಸಿ, ಕಠಿಣ ಕಾನೂನು ಕ್ರಮದ ಮೂಲಕ ಕ್ರಮ ಕೈಗೊಳ್ಳಬೇಕೆಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವೀರಶೈವ ಪದ್ಧತಿಯಂತೆ ಶವ ಸಂಸ್ಕಾರ: ನಟ ದರ್ಶನ್ ಮತ್ತು ಗ್ಯಾಂಗ್‌ನಿಂದ ಹತ್ಯೆಗೀಡಾದ ರೇಣುಕಾಸ್ವಾಮಿಯ ಮೃತ ದೇಹವನ್ನು ಬೆಂಗಳೂರಿನಿಂದ ಚಿತ್ರದುರ್ಗಕ್ಕೆ ತರಲಾಗಿದ್ದು, ವೀರಶೈವ ಜನಾಂಗದ ಪದ್ಧತಿಯಂತೆ ಶವ ಸಂಸ್ಕಾರ ನಡೆಸಲು ಸಿದ್ಧತೆ ನಡೆಸಿದ್ದು, ಶವ ಸಂಸ್ಕಾರದ ಸಂದರ್ಭದಲ್ಲಿ ಸಮಾಜದ ಮುಖಂಡರುಮತ್ತುಬಂಧು–ಬಳಗದವರು ಭಾಗಿಯಾಗುವ ನಿರೀಕ್ಷೆಗಳಿವೆ.

ಚಿತ್ರನಟ ದರ್ಶನ್ ಮತ್ತು ಗ್ಯಾಂಗ್ ನವರು ಕೊಲೆಮಾಡಿರುವ ರೇಣುಕಾಸ್ವಾಮಿ ಕುಟುಂಬದವರು ಸೌಮ್ಯ ಸ್ವಭಾವದವರಾಗಿದ್ದು, ಯಾರೊಂದಿಗೂ ಕೂಡ ಇದೂವರೆಗೂ ವಿವಾದಗಳನ್ನು ಮಾಡಿಕೊಂಡವರಲ್ಲ. ಸುತ್ತಮುತ್ತಲ ಜನರೊಂದಿಗೆ ಸ್ನೇಹಪರರಾಗಿ ಬಾಳಿ ಬದುಕಿದವರು. ಅಂತಹ ರೇಣುಕಾಸ್ವಾಮಿಯನ್ನು ಕರೆದೊಯ್ದು ದರ್ಶನ್ ಮತ್ತು ಗ್ಯಾಂಗ್‌ನ್ನು ಕಾನೂನು ರೀತ್ಯಾ ಕ್ರಮ ಕೈಗೊಳ್ಳಬೇಕೆಂದು ವೀರಶೈವ ಮುಖಂಡರು ಒತ್ತಾಯಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆ

» ಚಿತ್ರದುರ್ಗ

ನಗರದ ಜಂಟಿ ಕೃಷಿ ನಿರ್ದೇಶಕರ ಕಛೇರಿ ಸಭಾಂಗಣದಲ್ಲಿ, ಜೂನ್ 14 ರಂದು ಬೆಳಿಗ್ಗೆ 11.30ಕ್ಕೆ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಕೆ.ಬಿ.ಚಂದ್ರಶೇಖರಪ್ಪ ಅಧ್ಯಕ್ಷತೆಯಲ್ಲಿ ಜಿಲ್ಲಾ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ. ಸಭೆಯಲ್ಲಿ ಹಿಂದಿನ ನಡವಳಿಕೆ, ವಿವಿಧ ಇಲಾಖೆಗಳ ಅಭಿವೃದ್ಧಿ ಮತ್ತು ವಿವಿಧ ಸೌಲಭ್ಯಗಳ ಕುರಿತು ಚರ್ಚೆ, ಜಮಾ ಖರ್ಚು ಬಗ್ಗೆ ಪರಿಶೀಲನೆ ನಡೆಸಿ ಅಂಗೀಕರಿಸಲಾಗುವುದು. ಬಿತ್ತನೆ ಬೀಜ ದರ ಇಳಿಕೆ, ರೈತರಿಗೆ ಸಹಾಯ ಧನ, ಜಮೀನಿನ ಪಹಣಿ ಶುಲ್ಕ ದುಬಾರಿ ಹಾಗೂ ಅಧ್ಯಕ್ಷರ ಅಪ್ಪಣೆಯ ಮೇರೆಗೆ ಇತರೆ ವಿಚಾರಗಳನ್ನು ಚರ್ಚಿಸಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕ ತಿಳಿಸಿದ್ದಾರೆ.

### ಡಾ.ತಿಪ್ಪೇಸ್ವಾಮಿ ಪ್ರವಾಸ

» ಚಿತ್ರದುರ್ಗ

ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಜೂನ್ 13 ಮತ್ತು 14 ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಈ ವೇಳೆ ಜಿಲ್ಲೆಯಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆಗೆ ಸಂಬಂಧಿಸಿದಂತೆ ಪರಿಶೀಲನಾ ಭೇಟಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸುವರು. ಜೂನ್ 13 ರಂದು ಬೆಳಿಗ್ಗೆ 10.30 ರಿಂದ ಸಂಜೆ 6.30 ರವರೆಗೆ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳ ಶಾಲೆಗಳು, ವಿದ್ಯಾರ್ಥಿ ನಿಲಯಗಳು, ಮಕ್ಕಳ ಪಾಲನಾ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯ್ತಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಜೂನ್ 14 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 2.30 ರವರೆಗೆ ಜಿಲ್ಲಾ ಮಟ್ಟದ ಮಕ್ಕಳ ರಕ್ಷಣಾ ಸಮಿತಿಯ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ನಗರ ಪೊಲೀಸ್ ಠಾಣೆ, ಖಾಸಗಿ ಆಸ್ಪತ್ರೆಗಳ ಭೇಟಿ ನೀಡುವರು ಎಂದು ತಿಳಿಸಿದೆ.

### ವ್ಯಕ್ತಿಗಳು ಕಾಣೆ ಪತ್ತೆಗೆ ಮನವಿ

» ಚಿತ್ರದುರ್ಗ

ಚಿತ್ರದುರ್ಗ ನಗರದ ಕೋಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇಬ್ಬರು ವ್ಯಕ್ತಿಗಳು ಕಾಣೆಯಾದ ಕುರಿತು ಎರಡು ಪ್ರತ್ಯೇಕ ಪ್ರಕರಣ ದಾಖಲಾಗಿವೆ. ನಗರದ ಬರಗೇರಿ ಬೀದಿಯ 1ನೇ ಕ್ರಾಸ್‍ನ ಮಹಮ್ಮದ್ ಸುಹೇಬ್ ತಂದೆ ಹೊನ್ನೂರ್ ಸಾಬ್ (23ವರ್ಷ) ಯುವಕ ಕಾಣೆಯಾದ ಕುರಿತು 2024ರ ಮೇ 18 ರಂದು ಪ್ರಕರಣ ದಾಖಲಾಗಿದೆ. ಮಹಮದ್ ಸುಹೇಬ್ 5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಅಗಲ ಮುಖ, ಕುರುಚಲು ಗಡ್ಡ ಹೊಂದಿದ್ದು, ಕನ್ನಡ ಮತ್ತು ಉರ್ದು ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಕಂದು ಬಣ್ಣದ ಟೀಷರ್ಟ್, ಸಿಮೆಂಟ್ ಕಲರ್ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ನಗರದ ಇಂಡಿಯನ್ ಬ್ಯಾಂಕ್ ಹಿಂಬಾಗದ, ಜೋಗೇಶ್ ಪಾಳ್ಯದ ನಾಗೇಶ್ ತಂದೆ ಕೆಂಚಪ್ಪ (ಸು.35ವರ್ಷ) ಕಾಣೆಯಾದ ಕುರಿತು 2024ರ ಜನವರಿ 19 ರಂದು ಪ್ರಕರಣ ದಾಖಲಾಗಿದೆ. ನಾಗೇಶ್ 5.5 ಅಡಿ ಎತ್ತರ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ತಲೆಯಲ್ಲಿ ಕಪ್ಪು ಕೂದಲು ಹಾಗೂ ಕುತ್ತಿಗೆಯ ಎಡಭಾಗದಲ್ಲಿ ನಕ್ಷತ್ರದ ಟ್ಯಾಟು ಗುರುತು ಇದ್ದು, ಕನ್ನಡ, ಹಿಂದಿ ಮತ್ತು ತೆಲುಗು ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಕೆಂಪು ಬಿಳಿ ಬಣ್ಣದ ಚುಕ್ಕೆಗಳಿರುವ ತುಂಬು ತೋಳಿನ ಷರ್ಟ್, ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಈ ಮೇಲ್ಕಂಡ ವ್ಯಕ್ತಿಗಳ ಕುರಿತು ಮಾಹಿತಿ ತಿಳಿದು ಬಂದಲ್ಲಿ ಚಿತ್ರದುರ್ಗ ಕೋಟೆ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರ ದೂರವಾಣಿ ಸಂಖ್ಯೆ: 08194-222933, 9480803145. ಪೊಲೀಸ್ ಉಪಾಧೀಕ್ಷಕರು ಚಿತ್ರದುರ್ಗ ಉಪವಿಭಾಗ ದೂರವಾಣಿ ಸಂಖ್ಯೆ: 08194-222430, 9480803120, ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ : 08194-222782 ಗೆ ಸಂಪರ್ಕಿಸಬಹುದು.

### ವ್ಯಕ್ತಿ ಶವ ಪತ್ತೆಗೆ ಮನವಿ

» ಚಿತ್ರದುರ್ಗ

ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಟಿ.ನುಲೇನೂರು ಗ್ರಾಮದ ಬಳಿ ಸೆಕರೇಟರಿ ಈಶಣ್ಣನವರ ಅಡಿಕೆ ತೋಟದ ಮುಂಭಾಗದಲ್ಲಿ ಹಾದು ಹೋಗಿರುವ ಎನ್.ಹೆಚ್.13 ರಸ್ತೆಯಲ್ಲಿ ಸುಮಾರು 60-65 ವರ್ಷದ ಅನಾಮದೇಯ ವ್ಯಕಿಯ್ತ ಮೃತದೇಹ ಪತ್ತೆಯಾಗಿದೆ. ಮೃತನ ಹೆಸರು, ವಿಳಾಸ ತಿಳಿದು ಬಂದಿರುವುದಿಲ್ಲ. ಈ ಕುರಿತು 2024ರ ಮೇ 31 ರಂದು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತ ವ್ಯಕ್ತಿಯೂ ಸು.60-65 ವರ್ಷದವರಾಗಿದ್ದು, 5.5 ಅಡಿ ಎತ್ತರ, ಅಗಲವಾದ ಮುಖ, ಬಿಳಿಗಡ್ಡ, ಬೋಳು ತಲೆಯಾಗಿದ್ದು, ಸ್ವಲ್ಪ ಬಿಳಿ ಕೂದಲು ಇದ್ದು, ಮೃತನ ದೇಹದ ಮೇಲೆ ಮಾಸಲು ಬಿಳಿ ಬಣ್ಣದ ತುಂಬು ತೋಳಿನ ಜುಬ್ಬಾ, ಬಿಳಿ ಬಣ್ಣದ ಬನಿಯನ್, ನೀಲಿ ಬಣ್ಣದ ನಿಕ್ಕರ್, ಒಂದು ಎಳೆಯ ಕಪ್ಪು ಉಡುದಾರ ಹಾಗೂ ಕುತ್ತಿಗೆಯ ಕೆಳಭಾಗ ಕಪ್ಪು ಮಚ್ಚೆ ಇರುತ್ತದೆ. ಈ ಮೇಲ್ಕಂಡ ಅನಾಮದೇಯ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ, ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08191-277277, ಹೊಳಲ್ಕೆರೆ ವೃತ್ತ ನಿರೀಕ್ಷಕರ ಕಚೇರಿ ದೂವಾಣಿ ಸಂಖ್ಯೆ: 08191-275376, ಪೊಲೀಸ್ ಉಪಾಧೀಕ್ಷಕರ ಕಚೇರಿ ದೂರವಾಣಿ ಸಂಖ್ಯೆ: 08194-222430 ಹಾಗೂ ಜಿಲ್ಲಾ ಕಂಟ್ರೋಲ್ ರೂಂ: 08194-222782 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

### ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಕರೆ

# ಮಲೇರಿಯಾ ಮುಕ್ತ ಜಿಲ್ಲೆ ಎಲ್ಲರೂ ಸಹಕರಿಸಿ

» ಚಿತ್ರದುರ್ಗ





ಕೀಟಜನ್ಯ ರೋಗಗಳ ನಿಯಂತ್ರಣ ನಿರ್ಲಕ್ಷಿಸಬೇಡಿ ಮರಣದೊಂದಿಗೆ ಕುಟುಂಬಕ್ಕೆ ಆರ್ಥಿಕ ಹೊರೆಯಾಗುತ್ತದೆ. ಮಲೇರಿಯಾ ಮುಕ್ತ ಚಿತ್ರದುರ್ಗಕ್ಕಾಗಿ ಎಲ್ಲರೂ ಸಹಕರಿಸಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಕರೆ ನೀಡಿದರು.

ಇಲ್ಲಿನ ಕರುವಿನಕಟ್ಟೆ ವೃತ್ತ ಸಮೀಪದ ಕಬೀರಾನಂದಾಶ್ರಮದ ಶಾಲಾ ಮಕ್ಕಳಿಂದ ಬುಧವಾರ ಜನ ಜಾಗೃತಿ ಜಾಥಾ ಮಲೇರಿಯಾ ವಿರೋಧಿ ಮಾಸಾಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಖ್ಯಆರೋಗ್ಯಮೇಲ್ವಿಚಾರಣಾಧಿಕಾರಿ ಎಂ.ಬಿ.ಹನುಮಂತಪ್ಪ ಮಾತನಾಡಿ, ಮಾನ್ಸೂನ್ ದಿನಗಳಲ್ಲಿ ಮಳೆಯ ಕಾರಣ ಮನವ ನಿರ್ಮಿತ ಘನ ತ್ಯಾಜ್ಯ ವಸ್ತುಗಳಾದ ಎಳನೀರಿನ ಬುರುಡೆ, ಒಡೆದ ಮಡಕೆ ಹಂಚು ಚಿಪ್ಪು ಗುಂಡಿಗಳಲ್ಲಿ ನೀರು ಸೇರಿ ಸೊಳ್ಳೆಗಳ ಸಂತಾನೋತ್ಪತ್ತಿ ಹೆಚ್ಚಾಗಿ ಕೀಟ ಜನ್ಯ ರೋಗಗಳಾದ ಮಲೇರಿಯ, ಡೆಂಗ್ಯೂ, ಚಿಕನ್ ಗುನ್ಯಾ, ಆನೆಕಾಲು ರೋಗಗಳು ಹರಡುತ್ತವೆ. ಸಾರ್ವಜನಿಕರು ಬುದ್ಧಿವಂತರಾಗಿ ಮನೆಯ ಸುತ್ತಮುತ್ತಲಿನ ಪರಿಸರ ಸೊಳ್ಳೆಗಳ ತಾಣವಾಗದಂತೆ ಕ್ರಮವಹಿಸಿ. ಕೀಟಗಳು ಚಿಕ್ಕದಾದರೂ ಅವುಗಳು ನೀಡುವ ಬಾದೆ ದೊಡ್ಡದು ಎಂದರು. ಘನ ತ್ಯಾಜ್ಯ ವಸ್ತುಗಳನ್ನು ಸರಿಯಾದ ಜಾಗದಲ್ಲಿ ವಿಲೇವಾರಿ ಮಾಡಿ. ಯಾವುದೇ ಜ್ವರವಿರಲಿ, ರಕ್ತ ಪರೀಕ್ಷೆ ಮಾಡಿಸಿಕೊಳ್ಳಿ. ಶೀಘ್ರ ರೋಗಪತ್ತೆ ತ್ವರಿತ ಚಿಕಿತ್ಸೆ ಪಡೆಯುವುದರೊಂದಿಗೆ ಮಲೇರಿಯಾ ಮುಕ್ತ ಮಾಡೋಣ ಎಂದರು.


ಜಾಥಾವು ಕಬೀರಾನಂದ ಶಾಲೆಯಿಂದ ಹೊರಟು ಕರುವಿನಕಟ್ಟೆ ವೃತ್ತ, ಏಕನಾಥೇಶ್ವರಿ ಪಾದ ಗುಡಿಯ ತನಕ ಜರುಗಿತು.


ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ, ಬುದ್ದ ನಗರ ಆರೋಗ್ಯ ಕೇದ್ರದ ವೈದ್ಯಾಧಿಕಾರಿ ಡಾ.ಸುರೇಂದ್ರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗುರುಮೂರ್ತಿ, ರಂಗಾರೆಡ್ಡಿ, ಪ್ರವೀಣ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಕೋಟೇಶ್‌ಚಕ್ರವರ್ತಿ,ಪಾರ್ವತಿ,ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಾದ ತಿಪ್ಪಮ್ಮ, ಗೀತಾ, ಸುಜಾತ, ಏಕಾಂತಮ್ಮ ಶಾಲಾ ಶಿಕ್ಷಕರಾದ ನವೀನ್, ಪರಮೇಶ್ವರಪ್ಪ, ಆಶಾಕಾರ್ಯಕರ್ತೆಯರು, 150 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಚಿತ್ರದುರ್ಗ ನೂತನ ಸಂಸದ ಗೋವಿಂದ ಕಾರಜೋಳ ಅವರು ಮಾಜಿ ಪ್ರಧಾನಮಂತ್ರಿ, ಜೆಡಿಎಸ್ ವರಿಷ್ಠರಾದ ಎಚ್. ಡಿ ದೇವೇಗೌಡ ಅವರನ್ನು ಅವರ ಸ್ವಗೃಹದಲ್ಲಿ ಭೇಟಿಯಾಗಿ ಲೋಕಸಭಾ ಚುನಾವಣೆಯಲ್ಲಿ ನೀಡಿದ ಸಹಕಾರ ಮತ್ತು ಬೆಂಬಲಕ್ಕೆ ಧನ್ಯವಾದ ತಿಳಿಸಿ, ಆಶೀರ್ವಾದ ಪಡೆದರು

## ನೂತನ ಕೇಂದ್ರ ಸಚಿವರಿಗೆ ಶುಭಕೋರಿದ ರಘುಚಂದನ್





» ಚಿತ್ರದುರ್ಗ

ದೇವರಾಜ್‌ಅರಸ್‌ಶಿಕ್ಷಣಸಂಸ್ಥೆಯಮುಖ್ಯಕಾರ್ಯನಿರ್ವಹಣಾಧಿಕಾರಿ, ಬಿಜೆಪಿ. ಯುವ ಮುಖಂಡ ಎಂ.ಸಿ.ರಘುಚಂದನ್ ದೆಹಲಿಯಲ್ಲಿ ಕೇಂದ್ರ ಸಚಿವರುಗಳಾದ ಎಚ್.ಡಿ.ಕುಮಾರಸ್ವಾಮಿ, ಸೋಮಣ್ಣ ಇವರುಗಳನ್ನು ಭೇಟಿಯಾಗಿ ಶುಭ ಕೋರಿದರು.ಮಧ್ಯ ಕರ್ನಾಟಕದ ಬಯಲುಸೀಮೆ ಚಿತ್ರದುರ್ಗದಲ್ಲಿ ಕೈಗಾರಿಕೆಯನ್ನು ಸ್ಥಾಪಿಸಿ ನಿರುದ್ಯೋಗಿಗಳ ಕೈಗೆ ಕೆಲಸ ನೀಡಬೇಕು. ಭದ್ರಾಮೇಲ್ದಂಡೆ ಯೋಜನೆ ಶೀಘ್ರವೇ ಪೂರ್ಣಗೊಳ್ಳುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವುದರ ಜೊತೆಗೆ ಚಿತ್ರದುರ್ಗದಲ್ಲಿ ಶೀಘ್ರವೇ ಮೆಡಿಕಲ್ ಕಾಲೇಜು ಕಟ್ಟಡ ಪೂರ್ಣಗೊಳಿಸಿ ಜಿಲ್ಲೆಯ ಬಡವರಿಗೆ ಸುಲಭವಾಗಿ ವೈದ್ಯಕೀಯ ಚಿಕಿತ್ಸೆ ದೊರಕುವಂತೆ ಮಾಡಬೇಕೆಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ಸಚಿವ ಸೋಮಣ್ಣ ಇವರುಗಳಲ್ಲಿ ಮನವಿ ಮಾಡಿದರು.

# ಎಸ್‌ಆರ್‌ಎಸ್ ಕಾಲೇಜು ಪ್ರತಿಭೆಗಳ ಅನ್ವೇಷಣೆಗೆ ಸದಾ ಮುಂದು: ಕೃಷ್ಣಪ್ರಸಾದ್

» ಚಳ್ಳಕೆರೆ



ನಗರದ ಪ್ರತಿಷ್ಠಿತ ಕಾಲೇಜುಗಳಲ್ಲಿ ಒಂದಾದ ಎಸ್‌ಆರ್‌ಎಸ್ ಕಾಲೇಜು ಶೈಕ್ಷಣಿಕ ಕ್ಷೇತ್ರದಲ್ಲಿ ತನ್ನದೇಯಾದ ವಿಶೇಷ ದಾಖಲೆಯನ್ನು ನಮೂದಿಸುವ ಮೂಲಕ ವಿದ್ಯಾರ್ಥಿಗಳ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸಿದೆ ಎಂದು ಸಂಸ್ಥೆಯ ಆಡಳಿತಾಧಿಕಾರಿ ಪಿ.ಎನ್.ಕೃಷ್ಣಪ್ರಸಾದ್ ತಿಳಿಸಿದರು.

ಅವರು, ಬುಧವಾರ ಕಾಲೇಜು ಸಭಾಂಗಣದಲ್ಲಿ ನಡೆದ ಪ್ರಸ್ತುತ 2023-04ನೇ ಸಾಲಿನ ಜೆಇಇ ಪರೀಕ್ಷೆಯಲ್ಲಿ 2572, ನೀಟ್ ರಾಷ್ಟ್ರಮಟ್ಟದ ಪರೀಕ್ಷೆಯಲ್ಲಿ 4300ನೇ ರ‍್ಯಾಂಕ್ ಪಡೆದ ಕಾಲೇಜಿನ ವಿದ್ಯಾರ್ಥಿನಿ ಎನ್.ನವ್ಯರವರನ್ನು ಅಭಿನಂದಿಸಿ ಮಾತನಾಡಿದರು. ನವ್ಯ ಪ್ರಾರಂಭದಿಂದಲೇ ತನ್ನ ಶಿಕ್ಷಣದ ಕಲಿಕೆಯ ಬಗ್ಗೆ ವಿಶೇಷ ಆಸಕ್ತಿ ವಹಿಸುತ್ತಿದ್ದಳು. ನಾಯಕನಹಟ್ಟಿಯ ಹೋಬಳಿಯ ಎನ್. ಮಹದೇವಪುರ ಗ್ರಾಮದ ಕೃಷಿಕ ನಾಗರಾಜು, ನಿರ್ಮಲ ದಂಪತಿಯ ಪುತ್ರಿಯಾದ ಎನ್.ನವ್ಯ ವೈದ್ಯಕೀಯ ಸೀಟು ಪಡೆಯಲು ಈ ರ‍್ಯಾಂಕ್ ಸಹಕಾರಿಯಾಗಲಿದೆ. ರ‍್ಯಾಂಕ್ ಪಡೆಯುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾಳೆಂದರು.

ಪ್ರಾಂಶುಪಾಲ ಜಿ.ಸತ್ಯನಾರಾಯಣ ಮಾತನಾಡಿ, ಜೆಇಇ ಮತ್ತು ನೀಟ್ ಪರೀಕ್ಷೆಯಲ್ಲಿ ರಾಷ್ಟ್ರಮಟ್ಟದಲ್ಲಿ ರ‍್ಯಾಂಕ್ ಪಡೆಯುವುದ ಎಂದರೆ ಸುಲಭವಲ್ಲ, ಅದಕ್ಕೆ ಅದರದ್ದೇಯಾದ ಕಠಿಣ ಪರಿಶ್ರಮ, ಶ್ರದ್ದೆ ಇರಬೇಕು. ಆದರೆ, ಗ್ರಾಮೀಣ ಭಾಗದಲ್ಲಿ ತನ್ನ ವಿದ್ಯಾಭ್ಯಾಸವನ್ನು ಕಲಿತು, ಕಾಲೇಜಿಗೆ ಸೇರ್ಪಡೆಯಾದ ಎನ್.ಮಹದೇವಪುರ ಎನ್.ನವ್ಯ ರಾಷ್ಟ್ರಮಟ್ಟದ ಪರೀಕ್ಷೆಯಲ್ಲಿ ಸ್ಥಾನ ಪಡೆದಿರುವುದು ಸಂತಸವಿಷಯ ಎಂದರು.ವಿದ್ಯಾರ್ಥಿನಿ ಎನ್.ನವ್ಯ ಸಾಧನೆಗೆ ವಿದ್ಯಾಸಂಸ್ಥೆಯ ಅಧ್ಯಕ್ಷ ಬಿ.ಎನ್.ಲಿಂಗಾರೆಡ್ಡಿ, ಕಾರ್ಯದರ್ಶಿ ಸುಜಾತಲಿಂಗಾರೆಡ್ಡಿ, ಉಪಾಧ್ಯಕ್ಷ ಬಿ.ಎನ್.ಅಮೋಘ, ಹರಿಟೇಜ್ ಕಾಲೇಜು ಪ್ರಾಂಶುಪಾಲ ವಿಜಯ್ ಅಭಿನಂದಿಸಿದ್ದಾರೆ.

## ಪ್ರಮುಖ ಸುದ್ದಿ

# ಬಾಲಕಾರ್ಮಿಕ ಪದ್ದತಿ ಸಂಪೂರ್ಣವಾಗಿ ತೊಲಗಿಸಲು ಕಾರ್ಮಿಕ ಇಲಾಖೆಯೊಂದಿಗೆ ಎಲ್ಲರೂ ಸಹಕರಿಸಿ: ಶಮೀರ್ ಪಿ.ನಂದ್ಯಾಲ

» ಚಳ್ಳಕೆರೆ




ಬಾಲಕಾರ್ಮಿಕರನ್ನು ಕಾರ್ಖಾನೆಗಳಲ್ಲಿ ಸೇವೆಗೆ ತೊಡಗಿಸಿಕೊಂಡರೆ ಅದು ಕಾನೂನಿನ ವಿರುದ್ದವಾಗಿದ್ದು ಅಂತಹ ವ್ಯಕ್ತಿಗಳನ್ನು ಶಿಕ್ಷಿಸಲು ಕಾನೂನಿನಲ್ಲಿ ಅವಕಾಶವಿದೆ ಎಂದು ಸಿವಿಲ್ ನ್ಯಾಯಾಲಯದ ಹಿರಿಯ ನ್ಯಾಯಾಧೀಶ ಶಮೀರ್ ಪಿ.ನಂದ್ಯಾಲ ತಿಳಿಸಿದರು.

ಅವರು, ಬುಧವಾರ ನಗರದ ಎಚ್‌ಪಿಪಿಸಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಆವರಣದಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ನ್ಯಾಯಾಂಗ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಕಾರ್ಮಿಕರ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವಬಾಲಕಾರ್ಮಿಕರ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜೆಎಂಎಫ್‌ಸಿ ನ್ಯಾಯಾಧೀಶೆ ಕೆ.ಎಂ. ತೇಜಸ್ವಿನಿ ಮಾತನಾಡಿ, ಮಕ್ಕಳು ಓದುವ ಸಂದರ್ಭದಲ್ಲಿ ಅವರನ್ನು ಕೆಲಸಕ್ಕೆ ಸೇರ್ಪಡೆ ಮಾಡಿಕೊಳ್ಳುವುದು ಕಾನೂನು ಬಾಹಿರವಾಗುತ್ತದೆ. ಸರ್ಕಾರ ಕಣ್ಣು ತಪ್ಪಿಸಿ ಯಾರಾದರೂ ಬಾಲಕಾರ್ಮಿಕರನ್ನು ಉದ್ಯೋಗದಲ್ಲಿ ತೊಡಗಿಸಿಕೊಂಡರೆ ಅಂತಹವರ ವಿರುದ್ದ ಕಠಿಣ ಕಾನೂನು ಕ್ರಮ ಜರುಗಿಸಲು ಅವಕಾಶವಿದೆ ಎಂದರು.

ಅಪರಸಿವಿಲ್ ನ್ಯಾಯಾಧೀಶೆ ಎಚ್. ಆರ್.ಹೇಮಾ ಮಾತನಾಡಿ, ದೇಶದಲ್ಲಿ ಅನೇಕ ಕಾನೂನುಗಳು ನಮ್ಮ ಸೌಲಭ್ಯಗಳಿಗೆ ಇದ್ದರೂ ಅವುಗಳನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಬೇಕಿದೆ. ಬಾಲಕಾರ್ಮಿಕರು ಮುಗ್ದತೆಯನ್ನು ಹೊಂದಿದ್ದು ಅವರಿಗೆ ಆಮಿಷವೊಡ್ಡಿ ಕೆಲಸದಲ್ಲಿ ತೊಡಗಿಸಿಕೊಳ್ಳುವುದು ಅಪರಾಧವಾಗುತ್ತದೆ ಎಂದರು.

ಉಪನ್ಯಾಸ ನೀಡಿದ ವಕೀಲ ಡಿ.ಬಿ.ಬೋರಯ್ಯ, ದೇಶದ ಕಾನೂನು ಮತ್ತು ಪೊಲೀಸ್ ಇಲಾಖೆ ಬಾಲಕಾರ್ಮಿಕ ಪದ್ದತಿಯನ್ನು ವಿಮುಕ್ತಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿವೆ. ಬಾಲಕಾರ್ಮಿಕರಿಗೆ ಬೇರೆ ಯಾವುದೇ ವಿಚಾರದಲ್ಲಿ ಪ್ರೋತ್ಸಾಹ ನೀಡಬಹುದು ಆದರೆ, ಉದ್ಯೋಗವನ್ನು ನೀಡಿ ಅವರ ಭವಿಷ್ಯವನ್ನು ಅದೋಗತಿಗೆ ತಳ್ಳುವುದು ಬೇಡ. ಇಂದು ಸಹ ಅನೇಕ ಖಾಸಗಿ ವಲಯಗಳಲ್ಲಿ ಬಾಲಕಾರ್ಮಿಕರು ಕಾರ್ಯನಿರ್ವಹಿಸುತ್ತಿರುವ ಉದಾಹಣೆ ಇದ್ದು ಇವುಗಳ ವಿರುದ್ದ ಸಂಬಂಧಪಟ್ಟ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದರು.

ಎಚ್‌ಪಿಪಿಸಿ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎ.ವೀರಣ್ಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ತಹಶೀಲ್ದಾರ್ ರೇಹಾನ್‌ಪಾಷ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಕಾರ್ಮಿಕ ಅಧಿಕಾರಿ ಟಿ.ಕುಸುಮ, ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಎಂ.ಸಿದ್ದರಾಜು, ಖಜಾಂಚಿ ಟಿ.ರುದ್ರಯ್ಯ, ದೊರೆ ನಾಗರಾಜು, ಶಿಕ್ಷಕರಾದ ಹಿರೇಮಠ, ಪ್ರಾಣೇಶ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಕುಕ್ಕವಾಡ, ಶ್ಯಾಗಲೆ, ಆನಗೋಡು, ಅತ್ತೀಗೆರೆ ಮತ್ತು ಮಾಯಕೊಂಡ ವಿದ್ಯುತ್ ವಿತರಣ ಕೇಂದ್ರದಲ್ಲಿ ತುರ್ತು ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಜೂನ್ 13 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಕುಕ್ಕವಾಡ, ಕೊಲಕುಂಟೆ, ಗಿರಿಯಾಪುರ, ಕೈದಾಳೆ, ಹದಡಿ, ಕಲಬಂಡೆ, ಲೋಕಿಕೆರೆ, ಬಲ್ಲೂರು, ಕನಗೊಂಡನಹಳ್ಳಿ, ಮತ್ತಿ, ನಾಗರಸನಹಳ್ಳಿ, ಹೂವಿನಮಡು ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು, ಶ್ಯಾಗಲೆ ವ್ಯಾಪ್ತಿಯ ಶ್ಯಾಗಲೆ, ಕಂದ್ಗಲ್ಲು, ಕೋಡಿಹಳ್ಳಿ, ಗೋಣಿವಾಡ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು, ಆನಗೋಡು ವ್ಯಾಪ್ತಿಯ ಹನುಮನಹಳ್ಳಿ, ಕೊಗ್ಗನೂರು, ಹನುಮನಹಳ್ಳಿ, ಆನಗೋಡು, ಹೆಬ್ಬಾಳು, ನೀರ್ಥಡಿ, ಶಿವಪುರ, ಹಾಲುವರ್ತಿ, ಗಂಗನಕಟ್ಟೆ, ನೇರ್ಲಿಗಿ, ಚಿನ್ನಸಮುದ್ರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಅತ್ತಿಗೆರೆ ವ್ಯಾಪ್ತಿಯ ಆರಾಧ್ಯಾ ಕೈಗಾರಿಕೆ, ದಿಂಡದಹಳ್ಳಿ, ನರಗನಹಳ್ಳಿ, ಮಾಯಕೊಂಡ, ಬೊಮ್ಮನಹಳ್ಳಿ, ಬಾವಿಹಾಳು, ಬುಳ್ಳಾಪುರ, ಕೊಡಗನೂರು, ನಲ್ಕುಂದ, ಬಸಾಪುರ, ಅಣಬೇರು ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ಡಿಫೆನ್ಸ್ ಕೋಟಾದಡಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಮಾಜಿ ಸೈನಿಕರು, ಮಾಜಿ ಸೈನಿಕ ಅವಲಂಭಿತರ ಮಕ್ಕಳ ವೈದ್ಯಕೀಯ ಮತ್ತು ದಂತ ವೈದ್ಯಕೀಯ ವ್ಯಾಸಂಗಕ್ಕಾಗಿ ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಸೀಟು ಹಂಚಿಕೆಯ ಮೇರೆಗೆ, ಕೇಂದ್ರೀಯ ಸೈನಿಕ ಮಂಡಳಿಯಿಂದ ಡಿಫೆನ್ಸ್ ಕೋಟಾದಡಿಯಲ್ಲಿ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ (ಎನ್.ಇ.ಇ.ಟಿ) ನಲ್ಲಿ ಅರ್ಹತೆ ಪಡೆದಿರುವ ವಿದ್ಯಾರ್ಥಿಗಳು ಕೇಂದ್ರೀಯ ಸೈನಿಕ ಮಂಡಳಿ ಜಾಲತಾಣ "ಔಓಐಖಓಇ. ಏಖಃ.ಉಔಗಿ.ಖಓ" ಇಲ್ಲಿ ಜೂನ್ 10 ರಿಂದ ಜುಲೈ 09 ರೊಳಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ಪಡೆದ ದೃಢೀಕೃತ ಅರ್ಹತಾ ಪ್ರಮಾಣ ಪತ್ರದೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ. ಅಥವಾ ದೂ.ಸಂಖ್ಯೆ 08182-220925 ಗೆ ಕರೆ ಮಾಡಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರಾದ ಡಾ. ಸಿ.ಎ ಹಿರೇಮಠ ಇವರು ತಿಳಿಸಿರುತ್ತಾರೆ.

### ಶ್ರೀಬಸವೇಶ್ವರ ಕಾನ್ವೆಂಟ್ ಹಿರಿಯಪ್ರಾಥಮಿಕ ಶಾಲೆಯ ಮಾನ್ಯತೆಯನ್ನು ಹಿಂಪಡೆಯಲಾಗಿದೆ.

» ದಾವಣಗೆರೆ

ಬಸವೇಶ್ವರ ಕಾನ್ವೆಂಟ್ ಎಲ್.ಪಿ.ಎಸ್. ಕೆ.ಹೆಚ್.ಬಿ ಕಾಲೋನಿ ದಾವಣಗೆರೆ ಇಲ್ಲಿರುವ ಶಾಲೆಯ ನಿವೇಶನದ ಭೂ ಪರಿವರ್ತನೆಯ ಆದೇಶವನ್ನು ಮಾನ್ಯ ಜಿಲ್ಲಾಧಿಕಾರಿಗಳು ರದ್ದುಪಡಿಸಿದ್ದರೂ ಸಹ ಇಲಾಖೆಗೆ ತಪ್ಪು ದಾಖಲೆ, ಮಾಹಿತಿ ನೀಡಿ ಮಾನ್ಯತೆ ನವೀಕರಣ ಮಾಡಿಸಿಕೊಂಡಿರುವುದನ್ನು ಗಂಭೀರವಾಗಿ ಪರಿಗಣಿಸಿ ಪ್ರಸ್ತುತ ಪ್ರಕರಣವು ನ್ಯಾಯಾಲಯದ ಹಂತದಲ್ಲಿರುವುದರಿಂದ ಶ್ರೀ ಬಸವೇಶ್ವರ ಕಾನ್ವೆಂಟ್ ಎಲ್.ಸಿ.ಎಸ್. ಕೆ.ಎಚ್.ಬಿ ಕಾಲೋನಿ, ದಾವಣಗೆರೆ ಈ ಸಂಸ್ಥೆಗೆ 1 ರಿಂದ 8 ನೇ ತರಗತಿಯವರೆಗೆ ನೀಡಲಾದ ಮಾನ್ಯತೆಯನ್ನು ಹಿಂಪಡೆಯಲು ಆದೇಶಿಸಿಲಾಗಿದೆ. ಸಾರ್ವಜನಿಕರು ಹಾಗೂ ಪೋಷಕರು ಈ ಶಾಲೆಗೆ ಪ್ರಸಕ್ತ ಸಾಲಿಗೆ ಮಕ್ಕಳನ್ನು ದಾಖಲು ಮಾಡಬಾರದೆಂದು ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ತಿಳಿಸಿದ್ದಾರೆ.

### ವಿಶ್ವ ರಕ್ತದಾನಿ ದಿನಾಚರಣೆ

» ದಾವಣಗೆರೆ

ಜೂನ್ 14 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಚಿಗಟೇರಿ ಆಸ್ಪತ್ರೆಯ ಮುಂಭಾಗದಲ್ಲಿ "20 ವರ್ಷಗಳಿಂದ ಕೊಡುತ್ತಿರುವ ಸಂಭ್ರಮಾಚರಣೆ, ರಕ್ತದಾನಿಗಳಿಗೆ ಧನ್ಯವಾದಗಳು" ಎಂಬ ಘೋಷಣೆಯೊಂದಿಗೆ ವಿಶ್ವ ರಕ್ತದಾನಿಗಳ ದಿನಾಚರಣೆಯನ್ನು ಆಯೋಜಿಸಲಾಗಿದೆ. ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ರಕ್ತ ಕೇಂದ್ರ ಚಿಗಟೇರಿ ಜಿಲ್ಲಾ ಆಸ್ಪತ್ರೆ, ಜಿಲ್ಲೆಯ ವಿವಿಧ ರಕ್ತ ಕೇಂದ್ರಗಳು, ಜಿಲ್ಲಾ ಆರ್.ಆರ್.ಸಿ ಕಾಲೇಜುಗಳು ಹಾಗೂ ವಿವಿಧ ಸ್ವಯಂ ಸೇವಾ ಸಂಘ ಸಂಸ್ಥೆಗಳು ದಾವಣಗೆರೆ ಇವರುಗಳ ಸಹಯೋಗದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಉದ್ಘಾಟಿಸುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ ಅಧ್ಯಕ್ಷತೆ ವಹಿಸುವರು. ಬೆಳಿಗ್ಗೆ 8 ಗಂಟೆಗೆ ನಡೆಯುವ ಜಾಥಾಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಅಧಿಕಾರಿಸುರೇಶ್.ಬಿ.ಇಟ್ನಾಳ್ ಚಾಲನೆ ನೀಡುವರು. ಮುಖ್ಯ ಅತಿಥಿಗಳಾಗಿ ಜಿಗಟೇರಿ ಜಿಲ್ಲಾ ಆಸ್ಪತ್ರೆಯ ಅಧೀಕ್ಷಕರಾದ ಡಾ; ನಾಗೇಂದ್ರಪ್ಪ ಎಂ.ಬಿ, ವ ಅಧೀಕ್ಷಕರಾದ ಡಾ.ಮಧು. ಎಸ್.ಪಿ, ಭಾಗವಹಿಸುವರು.

# ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ: ಜಾಗೃತಿ

» ಚಿತ್ರದುರ್ಗ

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಚಿತ್ರದುರ್ಗ ನಗರದಲ್ಲಿ ಬುಧವಾರ ಜಾಗೃತಿ ಜಾಥಾ ನಡೆಯಿತು.

ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಗಾಯತ್ರಿ ಸರ್ಕಲ್ ಬಳಿಯ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲಾ ಆವರಣದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಜಾಥಾ ಕಾರ್ಯಕ್ರಮಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್ ಹಾಗೂ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಜಾಥಾದಲ್ಲಿ ಭಾಗಿಯಾಗಿದ್ದ ವಿದ್ಯಾರ್ಥಿಗಳು "ಮಕ್ಕಳನ್ನು ಶಾಲೆಗೆ ಕಳುಹಿಸಿ-ಕೆಲಸಕ್ಕಲ್ಲ", ಮಕ್ಕಳ ದುಡಿಮೆ ಜೀವನವಿಡಿ ಬವಣೆ, ಶಿಕ್ಷಣವಿಲ್ಲದ ಬಾಳು ಅಂಧಕಾರದ ಗೋಳು, ಮಕ್ಕಳಿಗೆ ವಿದ್ಯೆ-ದೊಡ್ಡವರಿಗೆ ಕೆಲಸ, ಮಕ್ಕಳ ದುಡಿಮೆ ಸಾಕು ಶಿಕ್ಷಣ ಬೇಕು, ಕೂಲಿ ಬಿಡಿಸಿ ಶಾಲೆಗೆ ಕಳುಹಿಸಿ, ಎಳೆಯ ವಯಸ್ಸು ಕಲಿಯುವ ವಯಸ್ಸು, ಬಾಲ್ಯದಲ್ಲಿ ಕಮರಿದ ಜೀವ ಮತ್ತೆಂದೂ ಅರಳದು, ಬೆಳೆಯುವ ವಯಸ್ಸಿನಲ್ಲಿ ದುಡಿಯಲು ದೂಡಬೇಡಿ, ಬಾಲಕಾರ್ಮಿಕ ಪದ್ಧತಿ ನಿವಾರಣೆ ದೇಶದ ಸರ್ವತೋಮುಖ ಸುಧಾರಣೆ, ಮಕ್ಕಳಿಗೆ ಬೇಕು ಆಟ-ಪಾಠ, ಬೇಡ ಕಾರ್ಖನೆಗಳ ಕೆಲಸಗಳ ಕಾಟ, ನಟ್ಟು ಬೋಲ್ಟ್ ಕೊಡಿಸದಿರಿ ಸ್ಲೇಟು ಬಳಪ ಕೊಡಿಸಿ, ಕುಂಟು ನೆಪಗಳನ್ನು ನಿಲ್ಲಿಸಿ, ಮಕ್ಕಳನ್ನು ಶಾಲೆಗೆ ಸೇರಿಸಿ, ಮಕ್ಕಳ ಹಕ್ಕುಗಳನ್ನು ಅರಿಯಿರಿ, ಅರಿತು ಅವರ ಬೆಳೆಸಿರಿ, ಮಕ್ಕಳನ್ನು ಹಕ್ಕುಗಳನ್ನು ಅರಿಯಿರಿ, ಬನ್ನಿ, ಬನ್ನಿ, ಬಾಲಕಾರ್ಮಿಕ ಪದ್ಧತಿಯನ್ನು ತಡೆಯೋಣ, ಸತ್ಪ್ರಜೆಗಳನ್ನಾಗಿಸಲು ಹುರಿದುಂಬಿಸೋಣ, ಶಿಕ್ಷಣ ಕಲಿಯೋಣ ಉತ್ತಮವಾಗಿ ಬಾಳೋಣ, ಬೇಡ, ಬೇಡ ಮಾಲೀಕ "ಬಾಲಕಾರ್ಮಿಕ" ಎಂಬಿತ್ಯಾದಿ ಬಾಲಕಾರ್ಮಿಕಹಾಗೂಕಿಶೋರಕಾರ್ಮಿಕ ಪದ್ಧತಿ ವಿರೋಧಿ ಘೋಷಣೆಗಳೊಂದಿಗೆ ನಗರದ ಹೊಳಲ್ಕೆರೆ ರಸ್ತೆಯ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲಾ ಆವರಣದಿಂದ ಪ್ರಾರಂಭವಾದ ಜಾಗೃತಿ ಜಾಥಾ ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಲಾಯಿತು.



ಚಿತ್ರದುರ್ಗ ನಗರದಲ್ಲಿ ಬುಧವಾರ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಜಾಗೃತಿ ಜಾಥಾಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್ ಹಾಗೂ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಜಾಥಾವು ನಗರದ ಜಿಲ್ಲಾಧಿಕಾರಿಗಳ ಕಚೇರಿ ಹತ್ತಿರದ ಒನಕೆ ಓಬವ್ವ ವೃತ್ತದ ಬಳಿ ಆಗಮಿಸಿದಾಗ ಮಾನವ ಸರಪಳಿ ನಿರ್ಮಿಸಿ, ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಕುರಿತು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್ ಅವರು ಪ್ರಮಾಣ ವಚನ ಬೋಧಿಸಿದರು.

ಜಾಥಾದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಿಡಿದಿದ್ದ ಹಲವಾರು ಸಂದೇಶದ ಫಲಕಗಳು ಗಮನ ಸೆಳೆದವು. ಜಾಥಾದಲ್ಲಿ ನಗರದ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು, ಎಸ್‌ಜೆಎಂ ಕಾನೂನು ಕಾಲೇಜಿನ ವಿದ್ಯಾರ್ಥಿಗಳು, ಅಗಸನಕಲ್ಲು ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಜಾಥಾದಲ್ಲಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ,ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ, ಕಾರ್ಯದರ್ಶಿ ಆರ್.ಗಂಗಾಧರ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಸಿ.ಪ್ರಭಾಕರ್, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಸಿ.ಸವಿತಾ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ನಾಸೀರುದ್ದೀನ್, ಕಾರ್ಮಿಕ ಅಧಿಕಾರಿ ಬಿ.ಜಿ.ಚಂದ್ರಶೇಖರಯ್ಯ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಎಸ್‌ಜೆಎಂ ಕಾನೂನು ಕಾಲೇಜು ಪ್ರಾಂಶುಪಾಲ ದಿನೇಶ್, ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆ ಮುಖ್ಯ ಶಿಕ್ಷಕ ಪ್ರಕಾಶ್ ಸೇರಿದಂತೆ ಶಾಲಾ-ಕಾಲೇಜು ವಿದ್ಯಾರ್ಥಿಗಳು ಇದ್ದರು.

# ಚಿತ್ರದುರ್ಗ ಜಿಲ್ಲೆಯ ರೆಡ್‌ಕ್ರಾಸ್ ಸಂಸ್ಥೆಗೆ ಅತಿ ಶೀಘ್ರದಲ್ಲಿ ನಿವೇಶನ: ಜಿಲ್ಲಾಧಿಕಾರಿ ವೆಂಕಟೇಶ್

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ರೆಡ್‌ಕ್ರಾಸ್ ಸಂಸ್ಥೆಗೆ ಅತಿ ಶೀಘ್ರದಲ್ಲಿ ನಿವೇಶನವನ್ನು ನೀಡುವ ಭರವಸೆಯನ್ನು ಜಿಲ್ಲಾಧಿಕಾರಿಗಳು, ರೆಡ್ ಕ್ರಾಸ್ ಸಂಸ್ಥೆಯ ಅಧ್ಯಕ್ಷರಾದ ವೆಂಕಟೇಶ್ ನೀಡಿದರು.

ಚಿತ್ರದುರ್ಗ ನಗರದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬುಧವಾರ ನಡೆದ ರೆಡ್‌ಕ್ರಾಸ್ ಸಂಸ್ಥೆಯ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಚಿತ್ರದುರ್ಗದಲ್ಲಿ ರೆಡ್‌ಕ್ರಾಸ್ ಸಂಸ್ಥೆ ಉತ್ತಮವಾದ ಕೆಲಸವನ್ನು ಮಾಡುತ್ತಿದೆ, ನೊಂದವರ ಧ್ವನಿಯಾಗಿ ಅವರ ಕಷ್ಟಗಳಿಗೆ ಸ್ಪಂಧಿಸುತ್ತಿದೆ. ಕರೋನ ಸಮಯದಲ್ಲಿ ಉತ್ತಮವಾದ ಕೆಲಸವನ್ನು ಮಾಡುವುದರ ಮೂಲಕ ಜನ ಮನ್ನಣೆಯನ್ನು ಪಡೆದಿದೆ. ಇಲ್ಲಿ ನಾನು ಎ.ಸಿ.ಯಾದಾಗಿನಿಂದಲೂ ಸಹಾ ನೋಡಿದ್ದೇನೆ, ನಿಮಗೆ ಕಚೇರಿ ಮಾಡಲು ಜಾಗದ ಕೊರತೆ ಇದೆ ಎಂದು ನನಗೆ ಗೊತ್ತಿದೆ ಇದರ ಬಗ್ಗೆ ಇದರ ಬಗ್ಗೆ ನಾನು ಸುಮ್ಮನೇ ಇಲ್ಲ ಜಾಗವನ್ನು ನೋಡಲಾಗುತ್ತಿದೆ ಶೀಘ್ರವಾಗಿ ನಿಮಗೆ ಜಾಗವನ್ನು ನೀಡುವ ಭರವಸೆಯನ್ನು ಜಿಲ್ಲಾಧಿಕಾರಿಗಳು ಸಂಸ್ಥೆಯವರಿಗೆ ನೀಡಿದರು.

ಚಿತ್ರದುರ್ಗ ರಾಜ್ಯದ ಮಧ್ಯ ಭಾಗದಲ್ಲಿ ಇದೆ. ಇಲ್ಲಿ ರಾ,ಹೆ.4 ಮತ್ತು 13 ಹಾದು ಹೋಗುತ್ತದೆ ಅಪಘಾತಗಳು ಸಹಾ ಹೆಚ್ಚಾಗಿ ಆಗುತ್ತದೆ ಅಲ್ಲದೆ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬರುವವರ ಸಂಖ್ಯೆ ಸಹಾ ಹೆಚ್ಚಾಗುತ್ತಿದೆ. ಈ ಹಿನ್ನಲೆಯಲ್ಲಿ ರೆಡ್ ಕ್ರಾಸ್ ಸಂಸ್ಥೆಯ ಜವಾಬ್ದಾರಿಯ ಸಹಾ ಹೆಚ್ಚಾಗಿದೆ. ಚಿತ್ರದುರ್ಗದಲ್ಲಿ ಈ ಸಂಸ್ಥೆ ಉತ್ತಮವಾಗಿ ಕೆಲಸವನ್ನು ಮಾಡುತ್ತಿದೆ, ಇದಕ್ಕೆ ನಮ್ಮೆಲ್ಲ ಸಹಕಾರ ಇದೆ, ಇನ್ನೂ ಮುಂದೆಯೂ ಸಹಾ ಉತ್ತಮವಾದ ಕೆಲಸವನ್ನು ಮಾಡುವಂತೆ ಸಲಹೆಯನ್ನು ನೀಡಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ರೆಡ್‌ಕ್ರಾಸ್ ಸಂಸ್ಥೆಯ ಸಭಾಪತಿ ಶ್ರೀಮತಿ ಗಾಯತ್ರಿ ಶಿವರಾಂ,



ರೆಡ್‌ಕ್ರಾಸ್ ಸಂಸ್ಥೆಗೆ ದೇಶದಲ್ಲಿ ರಾಷ್ಟ್ರಪತಿಗಳು, ರಾಜ್ಯದಲ್ಲಿ ರಾಜ್ಯಪಾಲರು, ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳು ಅಧ್ಯಕ್ಷರಾಗಿರುತ್ತಾರೆ. ಈ ಮುಂಚೆ ಸಣ್ಣದಾಗಿ ಪ್ರಾರಂಭವಾದ ಈ ಸಂಸ್ಥೆ ಈಗ 220 ದೇಶಗಳಲ್ಲಿ ಇದೆ. 1920ರಲ್ಲಿ ಭಾರತಕ್ಕೆ ಬಂದ ಈ ಸಂಸ್ಥೆ 1921ರಲ್ಲಿ ಕರ್ನಾಟಕಕ್ಕೆ ಬಂತು, ಚಿತ್ರದುರ್ಗದಲ್ಲಿ 2000ರಲ್ಲಿ ಪ್ರಾರಂಭವಾಯಿತು. ಈಗ ಈ ಸಂಸ್ಥೆಗೆ 25 ವರ್ಷ ಆಚರಣೆಯಲ್ಲಿದೆ, ಆದರೆ ನಮಗೆ ಜಾಗ ಸಮಸ್ಯೆ ಉಂಟಾಗಿದೆ ಈ ಸಂಸ್ಥೆಗೆ ಸರಿಯಾದ ಜಾಗ ಇಲ್ಲ ನಮಗೆ ಬಂದ ಸಾಮಾನುಗಳನ್ನು ಸಂಗ್ರಹ ಮಾಡಲು ಸಹಾ ಜಾಗದ ಕೊರತೆ ಇದೆ ಈ ಹಿನ್ನಲೆಯಲ್ಲಿ ನಮಗೆ ಉತ್ತಮವಾದ ಜಾಗವನ್ನು ನೀಡುವಂತೆ ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿದರು.

ನಮ್ಮ ಈ ಸಮಯದಲ್ಲಿ ಹಲವರು ಆರೋಗ್ಯ, ರಕ್ತದಾನ ಶಿಬಿರಗಳನ್ನು ಮಾಡುವುದರ ಮೂಲಕ ಅಂಗವಿಕಲರಿಗೆ ವಿವಿಧ ರೀತಿಯ ಸಲಕರಣೆಗಳನ್ನು ವಿತರಣೆ ಮಾಡಲಾಗಿದೆ ರಕ್ತದಾನ ಶಿಬಿರಗಳ ಮೂಲಕ ರಕ್ತನಿಧಿ ಕೇಂದ್ರಕ್ಕೆ ರಕ್ತವನ್ನು ಸಂಗ್ರಹ ಮಾಡಿ ನೀಡಲಾಗಿದೆ. ಈ ಉತ್ತಮ ಕೆಲಸಗಳಿಗಾಗಿ ನಮ ಸಂಸ್ಥೆಗೆ ರಾಷ್ಟ್ರ ಪ್ರಶಸ್ತಿ ಲಭಿಸಿದೆ. ಕೋವಿಡ್ ಸಮಯದಲ್ಲಿ 108 ದಿನಗಳ ಕಾಲ ಆಸ್ಪತ್ರೆಗೆ ಬಂದ ರೋಗಿಗಳಿಗೆ ಮತ್ತು ಸಂಬಂಧಿಗಳಿಗೆ ಆಹಾರವನ್ನು ವಿತರಣೆ ಮಾಡಲಾಗಿತ್ತು ಎಂದರು.

ಈ ಸಂದರ್ಭದಲ್ಲಿ ಅರ್ಹ ಫಲಾನುಭವಿಗಳಿಗೆ ಹೈಜನಿಕ್ ಕಿಟ್ ಹಾಗೂ ಕೋವಿಡ್ ಸಮಯದಲ್ಲಿ ಮೃತ ಪಟ್ಟ ಓರ್ವ ಕುಟುಂಬಕ್ಕೆ ಹೊಲಿಗೆ ಯಂತ್ರ ಮತ್ತು ರೆಡ್‌ಕ್ರಾಸ್ ಸಂಸ್ಥೆಯ ಸದಸ್ಯರಿಗೆ ಐ.ಡಿ.ಕಾರ್ಡಗಳನ್ನು ವಿತರಣೆ ಮಾಡಲಾಯಿತು.

ಕಾರ್ಯದರ್ಶಿ ಮಜಹರುಲ್ಲಾ ಉಪ ಸಭಾಪತಿ ಅರುಣ್ ಕುಮಾರ್ ನಿರ್ದೇಶಕರಾದ ಮಹಮದ್ ಆಲಿ, ಕಾರ್ತಿಕ್, ಸುರೇಶ್ ಬಾಬು, ಸಾದಾ ಸುರೇಶ್, ಶಿವರಾಮ್, ಚೇತನ್, ಹನುಮಂತಪ್ಪ ಪೂಜಾರ್. ಸದಸ್ಯರಾದ ಗುರುಮೂರ್ತಿ, ಮಂಜುನಾಥ್ ಭಾಗವತ್, ಸುರೇಶ್ ಬಾಫ್ನ, ಶಂಕರ್, ವೀಣಾ ಜಯರಾಮ್, ರೀನಾ, ಮಹಂತಮ್ಮ, ಹನುಮಂತ ರೆಡ್ಡಿ, ಶಿವಣ್ಣ ಇನ್ನಿತರರು ಇದ್ದರು.

# ವಿವಿಧ ಬೇಡಿಕೆ ಈಡೇರಿಸುವಂತೆ ಮಹಿಳಾ ಸ್ವಚ್ಛವಾಹಿನಿ ಆಟೋ ಚಾಲಕರು ಸಂಘದಿಂದ ಧರಣಿ



» ಚಿತ್ರದುರ್ಗ

ಗ್ರಾಮ ಪಂಚಾಯಿತಿಗಳಲ್ಲಿ ಮಹಿಳಾ ನೌಕರರನ್ನು ಪಂಚಾಯಿತಿ ನೌಕರರೆಂದು ಪರಿಗಣಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ಮಹಿಳಾ ಸ್ವಚ್ಛ ವಾಹಿನಿ ಆಟೋ ಚಾಲಕರು ಹಾಗೂ ಸಹಾಯಕರ ಸಂಘ ಜಿಲ್ಲಾ ಸಮಿತಿಯಿಂದ ಜಿಲ್ಲಾ ಪಂಚಾಯಿತಿ ಎದುರು ಬುಧವಾರದಿಂದಅನಿರ್ಧಿಷ್ಠಾವಧಿ ಧರಣಿ ಆರಂಭಗೊಂಡಿದೆ.

ಬಾಕಿ ವೇತನ ಹಾಗೂ ವರ್ಷ ಪೂರ್ತಿ ವೇತನ ನೀಡಬೇಕು. ತರಬೇತಿ ಪಡೆದ ಎಲ್ಲರಿಗೂ ನೌಕರಿ ಹಾಗೂ ಸರ್ಕಾರಿ ಆದೇಶದಂತೆಆಟೋನೀಡಬೇಕು. ಗ್ರಾಮ ಪಂಚಾಯಿತಿಗಳಲ್ಲಿ ಹಾಜರಾತಿ ಬುಕ್ ಇಡಬೇಕು. ಪಂಚಾಯಿತಿಗಳಲ್ಲಿ ಗುರುತಿನ ಚೀಟಿ ನೀಡಿ ಪ್ರತಿ ತಿಂಗಳು ವೇತನ ಪಾವತಿಸಬೇಕು. ಪ್ರತಿ ತಿಂಗಳು ಉಚಿತ ಆರೋಗ್ಯ ತಪಾಸಣೆಯಾಗಬೇಕು. ಕೆಲಸ ಮಾಡುವವರಿಗೆ ಕಡ್ಡಾಯವಾಗಿ ಗ್ಲೌಸ್ ಮತ್ತು ಮಾಸ್ಕ್ ನೀಡಬೇಕು. ಶಾಸನಬದ್ದ ಅನುದಾನದಲ್ಲಿಯೇ ವರ್ಷ ಪೂರ್ತಿ ವೇತನ ನೀಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಆದೇಶಿಸಬೇಕು. ಇಲ್ಲವಾದಲ್ಲಿ ಜಾಗ ಬಿಟ್ಟು ಕದಲುವುದಿಲ್ಲ ಎಂದು ಪ್ರತಿಭಟನಾನಿರತ ಮಹಿಳೆಯರು ಪಟ್ಟು ಹಿಡಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಿ.ಎಂ.ಮಲಿಯಪ್ಪ ಮಾತನಾಡಿ ಅನೇಕ ಬಾರಿ ಪ್ರತಿಭಟನೆ ನಡೆಸಿ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದ್ದರೂ ಇದುವರೆವಿಗೂ ಯಾವ ಬೇಡಿಕೆಗಳು ಈಡೇರಿಲ್ಲ. ಜಿಲ್ಲೆಯ ಆರು ತಾಲ್ಲೂಕಿನ ಕಾರ್ಯ ನಿರ್ವಾಹಕ ಅಧಿಕಾರಿಗಳು ಹಾಗೂ ಪಿ.ಡಿ.ಓ.ಗಳ ಸಭೆ ನಡೆಸಿ ಎಲ್ಲರಿಗೂವೇತನನೀಡುವಕುರಿತು ತೀರ್ಮಾನ ತೆಗೆದುಕೊಂಡು ನ್ಯಾಯಯುತವಾದ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲವಾದಲ್ಲಿ ಮುಂದೆ ಆಗುವ ಅನಾಹುತಗಳಿಗೆ ನೀವುಗಳೆ ಜವಾಬ್ದಾರರು ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿಗೆ ಎಚ್ಚರಿಸಿದರು.

## ಪ್ರಮುಖ ಸುದ್ದಿ

### ಸಂಸದೆ ಪ್ರಿಯಾಂಕ ಜಾರಕಿಹೊಳಿಗೆ ಸಾಣೇಹಳ್ಳಿ ಶ್ರೀ ಸಲಹೆ

# ಚಿಕ್ಕವಯಸ್ಸಿಗೆ ಸಂಸದರಾಗಿದ್ದು, ಹೆಚ್ಚಿನ ಕೆಲಸ ಮಾಡಿ

» ಹೊಸದುರ್ಗ

ಜಾರಕಿಹೊಳಿ ಕುಟುಂಬ ಕಾಂಗ್ರೇಸ್, ಬಿಜೆಪಿ, ಜನತಾದಳ ಹಾಗೂ ಇನ್ನಿತರೆ ಯಾವುದೇ ಪಕ್ಷದ ಚಿನ್ಹೆಯಲ್ಲಿ ನಿಂತರು, ಚುನಾವಣೆಯಲ್ಲಿ ಗೆದ್ದು ಬರುತ್ತಿದ್ದಾರೆ. ಚಿಕ್ಕ ವಯಸ್ಸಿಗೆ ಜನ ನಿಮ್ಮನ್ನು ಸಂಸತ್ತಿಗೆ ಆಯ್ಕೆಮಾಡಿ ಕಳಿಸಿದ್ದು, ನೀವು ಇನ್ನೂ ಯುವಕರು ಮತ್ತು ವಿದ್ಯಾವಂತರಾಗಿದ್ದೀರಿ. ಪುರುಷರು ಮತ್ತು ಹಿರಿಯ ಸಂಸದರಿಗಿಂತ ಹೆಚ್ಚಿನ ಕೆಲಸ ಮಾಡಿ ಎಂದು ಸಂಸದೆ ಪ್ರಿಯಾಂಕ ಜಾರಕಿಹೊಳಿಗೆ ಶ್ರೀ ಪಂಡಿತರಾಧ್ಯ ಶಿವಾಚಾರ್ಯ ಸ್ವಾಮೀಜಿ ಸಲಹೆ ನೀಡಿದರು.

ತಾಲೂಕಿನ ಸಾಣೇಹಳ್ಳಿ ತರಳಬಾಳು ಶಾಖಾ ಮಠಕ್ಕೆ ಬುಧವಾರ ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ನೂತನವಾಗಿ ಆಯ್ಕೆಗೊಂಡಿರುವ ಕುಮಾರಿ ಪ್ರಿಯಾಂಕ ಜಾರಕಿಹೊಳಿಯವರು ಭೇಟಿ ನೀಡಿ, ಶ್ರೀಗಳ ಆಶೀರ್ವಾದ ಪಡೆದರು. ನಂತರ ಸ್ವಾಮೀಜಿ ಸಂಸದರನ್ನು ಸನ್ಮಾನಿಸಿ, ಅಭಿನಂದಿಸಿ ಮಾತನಾಡಿದರು.

ಪ್ರಿಯಾಂಕ ಚಿಕ್ಕವಯಸ್ಸಿನಲ್ಲಿ ಲೋಕಸಭಾ ಸದಸ್ಯೆಯಾಗಿರುವಂಥದ್ದು ಹೆಚ್ಚಿನ ಸೇವೆಯನ್ನು ಸಲ್ಲಿಸಲಿಕ್ಕೆ ಒಂದು ಸದಾವಕಾಶ ಸಿಕ್ಕಂತಾಗಿದೆ. ತಮ್ಮ 5 ವರ್ಷದ ಸೇವಾವಧಿಯಲ್ಲಿ ತಮ್ಮ ಕ್ಷೇತ್ರದ ಅಭಿವೃದ್ಧಿಗೆ ಬೇಕಾದ ಎಲ್ಲ ಕೆಲಸ ಕಾರ್ಯಗಳನ್ನು ಮಾಡುವಂಥ ಸಂಕಲ್ಪ ನಿಮ್ಮದಾಗಲಿ. ಅದರಲ್ಲೂ ಕರ್ನಾಟಕದಲ್ಲಿ 3 ಜನ ಮಹಿಳೆಯರು ಲೋಕಸಭಾ ಸದಸ್ಯರಾಗಿರುವಂಥದ್ದು ತುಂಬಾ ಸಂತೋಷ. ಚಿಕ್ಕೋಡಿಯಿಂದ ಪ್ರಿಯಾಂಕ ಜಾರಕಿಹೊಳಿ, ದಾವಣಗೆರೆಯಿಂದ ಪ್ರಭಾ ಮಲ್ಲಿಕಾರ್ಜುನ್ ಹಾಗೂ ಬೆಂಗಳೂರಿನಿಂದ ಶೋಭಾ ಕರಂದ್ಲಾಜೆ ಈ ಮೂರೂ ಜನ ಮಹಿಳೆಯರು ವಿದ್ಯಾವಂತರು. ಮಹಿಳೆಯರು ಪುರುಷರಿಗಿಂತ ಹೆಚ್ಚಿನ ಕೆಲಸ ಮಾಡಿ ತೋರಿಸಿ ಎಂದು ಹೇಳಿದರು.



ಮೊದಲಿಗೆ ಹೊಸದುರ್ಗ ಪಟ್ಟಣಕ್ಕೆ ಬಂದ ಸಂಸದೆ ಪ್ರಿಯಾಂಕ ಜಾರಕಿಹೊಳಿ ಅವರನ್ನು ನಾಯಕ ಸಮುದಾಯದ ಬಂಧುಗಳು ಪಟಾಕಿ ಸಿಡಿಸಿ ಅದ್ದೂರಿಯಾಗಿ ಸ್ವಾಗತಿಸಿ, ಸನ್ಮಾನಿಸಿದರು. ನಂತರ ಕೆಲ್ಲೋಡು ಕನಕ ಮಠಕ್ಕೆ ಭೇಟಿ ನೀಡಿ ಶ್ರೀ ಈಶ್ವರಾನಂದಪುರಿ ಸ್ವಾಮೀಜಿಗಳ ಆಶೀರ್ವಾದ ಪಡೆದುಕೊಂಡರು. ಅಲ್ಲಿಂದ ಬ್ರಹ್ಮ ವಿದ್ಯಾನಗರದ ಭಗೀರಥ ಗುರುಪೀಠಕ್ಕೆ ಭೇಟಿನೀಡಿ ಶ್ರೀಪುರುಷೋತ್ತಮಾನಂದಪುರಿ ಸ್ವಾಮೀಜಿ ಆಶೀರ್ವಾದ ಪಡೆದರು. ಇದೇ ಸಂದರ್ಭದಲ್ಲಿ ಉಪ್ಪಾರ ಸಮುದಾಯದ ಬಂಧುಗಳು ನೂತನ ಸಂಸದರನ್ನು ಸನ್ಮಾನಿಸಿ, ಅಭಿನಂದಿಸಿದರು.

ಈ ವೇಳೆ ಶಾಸಕ ಬಿ.ಜಿ. ಗೋವಿಂದಪ್ಪ, ಸಚಿವ ಸತೀಶ್ ಜಾರಕಿಹೊಳಿ ಪುತ್ರ ರಾಹುಲ್ ಜಾರಕಿಹೊಳಿ, ಜಿ.ಪಂ. ಮಾಜಿ ಅಧ್ಯಕ್ಷ ವಿಶಾಲಾಕ್ಷಿ ನಟರಾಜ್, ಜಿ.ಪಂ. ಮಾಜಿ ಉಪಾಧ್ಯಕ್ಷ ತಾಳಿಕಟ್ಟೆ ಗಂಗಾಧರ್, ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ರಾಜ್ಯ ಉಪಾಧ್ಯಕ್ಷ ತುಂಬಿನಕೆರೆ ಬಸವರಾಜ್, ಕಾಂಗ್ರೆಸ್ ಮುಖಂಡರಾದ ಆಂಜಿನಪ್ಪ, ಕಂದಿಕೆರೆ ಸುರೇಶ್, ಪಾಲಯ್ಯ ಕಾರ್ಯಕರ್ತರಿದ್ದರು.

> ನಮ್ಮ ತಂದೆ ಮತ್ತು ನಮ್ಮ ನಿರಂತರ ಸೇವೆಯ ಪರಿಣಾಮವಾಗಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಜನರು ನನಗೆ ಹೆಚ್ಚಿಗೆ ಮತ ನೀಡಿ, ಸಂಸತ್ತಿಗೆ ಆಯ್ಕೆ ಮಾಡಿ ಕಳಿಸಿದ್ದಾರೆ. ನಿರಂತರವಾಗಿ ನಮ್ಮ ಕುಟುಂಬ ನೊಂದ ಜನರಿಗೆ ನೆರವು ನೀಡುತ್ತಾ ಬಂದಿದೆ. ನಮ್ಮ ತಂದೆಯವರು ಕೂಡ ಶೋಷಿತರು, ಬಡವರು, ದಲಿತರು ಮತ್ತು ಹಿಂದುಳಿದವರ ಪರವಾಗಿ ಸಾಮಾಜಿಕ ಕಾರ್ಯಗಳನ್ನು ಮಾಡುತ್ತಾ, ನೆರವು ನೀಡುತ್ತಾ ಬಂದಿದ್ದಾರೆ. ಅಲ್ಲದೇ, ನಮ್ಮ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ತಂದಿರುವ 5 ಗ್ಯಾರಂಟಿ ಮತ್ತು ಮಾಡಿರುವ ಅಭಿವೃದ್ಧಿ ಕಾರ್ಯದಿಂದಾಗಿ ನನಗೆ ಚುನಾವಣೆಯಲ್ಲಿ ಜಯ ಲಭಿಸಿದೆ.
>
> » **ಪ್ರಿಯಾಂಕ ಸ.ಜಾರಕಿಹೊಳಿ ಸಂಸದರು, ಚಿಕ್ಕೋಡಿ ಲೋಕಸಭಾ ಕ್ಷೇತ್ರ.**

# ರೇಣುಕಸ್ವಾಮಿ ಕುಟುಂಬಕ್ಕೆ ಕಾರಜೋಳ ಸಾಂತ್ವನ

» **ಚಿತ್ರದುರ್ಗ**

ಸರ್ಕಾರ ಮೃತ ಕುಟುಂಬಕ್ಕೆ ನ್ಯಾಯ ಒದಗಿಸುವ ಕೆಲಸ ಮಾಡಬೇಕು ಮೃತರ ಪತ್ನಿಗೆ ಒಂದು ಕೆಲಸ ಕೊಟ್ಟು ಕುಟುಂಬ ಕಾಪಾಡುವ ಕೆಲಸ ಮಾಡಲಿ ಜಿಲ್ಲೆಯಲ್ಲಿಯೇ ಎಲ್ಲಾದ್ರು ಒಂದು ಕಡೆ ಜೀವನಕ್ಕೆ ಆಧಾರ ಆಗುವ ಕೆಲಸ ಕೊಡಬೇಕು ತನಿಖೆ ಹಂತದಲ್ಲಿದೆ, ಯಾರೇ ತಪ್ಪು ಮಾಡಿದ್ರು ಕಠಿಣ ಶಿಕ್ಷೆ ಆಗಲಿ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ನಗರದ ವಿಆರ್‌ಎಸ್ ಬಡಾವಣೆಯ ರೇಣುಕಸ್ವಾಮಿ ನಿವಾಸಕ್ಕೆ ಬುಧವಾರ ಸಂಜೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿ ಮಾತನಾಡಿದ ಅವರು, 'ಯಾರು ಕೂಡಾ ಕಾನೂನು ಕೈಗೆತ್ತಿಕೊಳ್ಳಬಾರದು. ಸರ್ಕಾರದ ಇಂಥ ಪ್ರಕರಣ ಗಂಭೀರವಾಗಿ ತೆಗೆದುಕೊಳ್ಳಬೇಕು. ಚಿತ್ರಹಿಂಸೆ ನೀಡಿ ಕೊಲೆ ಮಾಡಿದ್ದು ಮನಸ್ಸಿಗೆ ಅಘಾತ ಆಗಿದೆ ರೇಣುಕಾಸ್ವಾಮಿಯಿಂದ ನೋವಾಗಿದ್ರೆ ಪೊಲೀಸರಿಗೆ ದೂರು ನೀಡಬಹುದಿತ್ತು ಕೊಲೆ ಮಾಡಿರುವಂತದ್ದು, ಯಾರೂ ಸಹಿಸಿಕೊಳ್ಳುವಂತದ್ದಲ್ಲ ದುಡಿಯುವವರು ತೀರಿ ಹೋದಾಗ ನೋಡಿಕೊಳ್ಳುವವರು



ಯಾರೂ ಇರಲ್ಲ ಎಂದರು.

ರೇಣುಕಸ್ವಾಮಿ ಕೊಲೆ ಆಗಿದೆ ಎಂದು ದೆಹಲಿಯಲ್ಲಿದ್ದಾಗ ಸುದ್ದಿ ಕೇಳಿ ನೋವಾಯ್ತು. ಸಮಾಜದಲ್ಲಿ ಇಂಥ ಅಹಿತಕರ ಘಟನೆ ನಡೆಯಬಾರದು ರಾಜ್ಯದಲ್ಲಿ ಇಂಥ ಘಟನೆ ಪದೇ ಪದೇ ನಡೆಯುತ್ತಿವೆ. ಸರ್ಕಾರ ಮತ್ತು ಕಾನೂನಿನ ಭಯ ಇಲ್ಲವಾಗಿದೆ. ಸರ್ಕಾರ ಇಂಥ ಪ್ರಕರಣವನ್ನ ವಿಶೇಷವಾಗಿ ತನಿಖೆ ನಡೆಸಬೇಕು. ಯಾರೇ ಎಷ್ಟು ದೊಡ್ಡವರಿದ್ದರು ಶಿಕ್ಷೆಯಾಗಬೇಕು.

ತನಿಖೆಯಿಂದ ಸತ್ಯ ಹೊರಗೆ ಬರಬೇಕಿದೆ' ಎಂದು ತಿಳಿಸಿದ ಅವರು. ರೇಣುಕಾಸ್ವಾಮಿ ಸಮಸ್ಯೆ ಮಾಡಿದ್ದರೆ ದೂರು ನೀಡಬಹುದಿತ್ತು. ಈ ಕೊಲೆ ಯಾರು ಕೂಡಾ ಸಹಿಸುವುದಿಲ್ಲ. ಮೃತರ ಕುಟುಂಬಕ್ಕೆ ಸರ್ಕಾರ ನ್ಯಾಯ ಒದಗಿಸಬೇಕಿದೆ. ಮೃತಳ ಪತ್ನಿಗೆ ಸರ್ಕಾರಿ ಕೆಲಸ ನೀಡಬೇಕು' ಎಂದು ಒತ್ತಾಯಿಸಿದರು.

ಹುಬ್ಬಳ್ಳಿ, ಚಿತ್ರದುರ್ಗದಲ್ಲಿ ಇಂತಹ ಘಟನೆಗಳು ಪದೇ ಪದೇ ನಡೆಯುತ್ತಿವೆ ಸರ್ಕಾರ ಮತ್ತು ಕಾನೂನಿನ ಭಯ ಜನರಿಗೆ ಇಲ್ಲದಂತಾಗಿದೆಸರ್ಕಾರ ಇಂತಹ ಪ್ರಕರಣಗಳನ್ನು ವಿಶೇಷವಾಗಿ ತನಿಖೆ ಮಾಡಬೇಕು ಯಾರೇ ದೊಡ್ಡವರು, ಶ್ರೀಮಂತರು ಇರಲಿ ಅಂತವರಿಗೆ ಕಠಿಣ ಶಿಕ್ಷೆ ವಿಧಿಸಿ ಸಮಾಜಕ್ಕೆ ಸಂದೇಶ ಕೊಡಬೇಕು ಪ್ರಕರಣದಲ್ಲಿ ಯಾರೇ ಇರಲಿ ತನಿಖೆಯಿಂದ ಸತ್ಯ ಹೊರಬರಬೇಕಿದೆ ಎಂದರು.

ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಇದ್ದರು.

## ಫಾಸ್ಟ್ ನ್ಯೂಸ್

### ದೀನ ದಯಾಳ್ ಅಂತ್ಯೋದಯ ಯೋಜನೆ

» **ದಾವಣಗೆರೆ**

ದೀನ ದಯಾಳ್ ಅಂತ್ಯೋದಯ ಯೋಜನೆ-ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ ಯೋಜನೆಯಡಿ ಪ್ರಸಕ್ತ ಸಾಲಿಗೆ ಸ್ವಯಂ ಉದ್ಯೋಗ ವ್ಯಕ್ತಿಗತ ಉದ್ಯಮಶೀಲತೆ (ಸಾಲ ಮತ್ತು ಸಹಾಯಧನ), ಗುಂಪು ಉದ್ಯಮ ಕಾರ್ಯಕ್ರಮದಡಿ, ಗುಂಪು ಉದ್ಯಮ ಕೈಗೊಳ್ಳಲು, ಎಸ್.ಹೆಚ್.ಜಿ ಬ್ಯಾಂಕ್ ಕ್ರೆಡಿಟ್ ಲಿಂಕೇಜ್ ಕಾರ್ಯಕ್ರಮದಡಿ ಸಾಲ ಪಡೆಯಲು, ಕೌಶಲ್ಯಾಭಿವೃದ್ಧಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ ಕಾರ್ಯಕ್ರಮದಡಿ ವಿವಿಧ ತರಬೇತಿಯನ್ನು ಪಡೆಯಲು, ಮಹಿಳಾ ಸ್ವ ಸಹಾಯ ಸಂಘಗಳನ್ನು ರಚಿಸಲು, ವಿಕಲಚೇತನ ಪುರುಷರ ಸ್ವ ಸಹಾಯ ಸಂಘಗಳನ್ನು ರಚಿಸಲು, ಬೀದಿ ಬದಿ ವ್ಯಾಪಾರಿಗಳ ಸ್ವ ಸಹಾಯ ಸಂಘಗಳನ್ನು ರಚಿಸಲು ಆಸಕ್ತ ಅರ್ಹ ಫಲಾನುಭವಿಗಳಿಂದ, ಗುಂಪುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗಧಿತ ನಮೂನೆಗಳಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ, ಜುಲೈ 12 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಅರ್ಜಿಗಳನ್ನು ಸಲ್ಲಿಸುವ ಫಲಾನುಭವಿಗಳು ಹರಿಹರ ನಗರದ ನಿವಾಸಿಗಳಾಗಿರಬೇಕು, ಬಡತನ ರೇಖೆ ಕೆಳಗಿನ ಕುಟುಂಬದವರಾಗಿರಬೇಕು ಹಾಗೂ ಅರ್ಜಿಯೊಂದಿಗೆ ರೇಷನ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ನಿವಾಸಿ ದೃಢೀಕರಣ ಪತ್ರ, ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಅನುಭವ ಪ್ರಮಾಣ ಪತ್ರ, ಹುಟ್ಟಿದ ತಾರೀಖು ದೃಢೀಕರಣ ಪತ್ರ ಲಗತ್ತಿಸಿ. ಅರ್ಜಿಯನ್ನು ದ್ವಿ ಪ್ರತಿಯಲ್ಲಿ ಸಲ್ಲಿಸತಕ್ಕದ್ದು, ಹೆಚ್ಚಿನ ಮಾಹಿತಿಗಾಗಿ ಹರಿಹರ ನಗರಸಭೆ ಕಚೇರಿಯನ್ನು ಸಂಪರ್ಕಿಸಬೇಕೆಂದು ನಗರಸಭೆ ಪೌರಾಯುಕ್ತರು ಬಸವರಾಜ ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

» **ದಾವಣಗೆರೆ**

2024-2025 ಸಾಲಿನ ಡಿ.ಇಎಲ್.ಇಡಿ ದಾಖಲಾತಿಗಾಗಿ ಈಗಾಗಲೇ ಆಫ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಪ್ರಸಕ್ತ ಸಾಲಿನಲ್ಲಿ ದ್ವಿತೀಯ ಪಿಯುಸಿ 3ನೇ ಹಂತದ ಪರೀಕ್ಷೆ ಫಲಿತಾಂಶ ಬರುವವರೆಗೆ ಪ್ರವೇಶಕ್ಕಾಗಿ ದಿನಾಂಕವನ್ನು ವಿಸ್ತರಿಸಲಾಗಿದ್ದು ಆಸಕ್ತ ವಿದ್ಯಾರ್ಥಿಗಳು ಆಫ್ ಲೈನ್ ಮೂಲಕ ಅರ್ಜಿಗಳನ್ನು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್), ದಾವಣಗೆರೆ ಸಲ್ಲಿಸಬೇಕು. ಅರ್ಜಿಯನ್ನು WWW.schooleducation.karnataka.gov.in ನಲ್ಲಿ ಡೌನ್‌ಲೋಡ್ ಮಾಡಿಕೊಂಡು ನಿಗದಿತ ದಾಖಲೆಗಳು ಮತ್ತು ಡಿ.ಡಿ.ಯೊಂದಿಗೆ ನೋಡಲ್ ಕೇಂದ್ರವಾದ ಡಯಟ್ ಇಲ್ಲಿಗೆ ನಿಗದಿತ ದಿನಾಂಕದೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: ಕನ್ನಡ ಮಾಧ್ಯಮ 9164489972, 988030377, 9844401092, 08192-231156, ಉರ್ದು ಮಾಧ್ಯಮ 9164489972, 8867932439, 08192-231156 ಸಂಪರ್ಕಿಸಲು ಡಯಟ್ ಪ್ರಾಚಾರ್ಯರರು ಹಾಗೂ ಪದನಿಮಿತ್ತ ಉಪನಿರ್ದೇಶಕರಾದ ಗೀತಾ ತಿಳಿಸಿದ್ದಾರೆ.

### ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಅರ್ಜಿ

» **ದಾವಣಗೆರೆ**

ಪ್ರಸಕ್ತ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಚನ್ನಗಿರಿ ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ಮೆಟ್ರಿಕ್ ಪೂರ್ವ, ನಂತರದ ಬಾಲಕರ, ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. 5 ರಿಂದ 10 ತರಗತಿಯವರೆಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳು ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಿಗೆ ಪ.ಜಾತಿ, ಪ.ವರ್ಗ ಹಾಗೂ ಇತರೆ ವರ್ಗದ ವಿದ್ಯಾರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ಪ್ರತಿಯೊಂದಿಗೆ ಜಾತಿ, ಆದಾಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ, ಹಿಂದಿನ ತರಗತಿಯಲ್ಲಿ ಪಾಸಾದ ಅಂಕಪಟ್ಟಿಯ ಪ್ರತಿ, ವಿದ್ಯಾರ್ಥಿಯ ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿಗಳ ದೃಢೀಕೃತದೊಂದಿಗೆ ಚನ್ನಗಿರಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಸಂಬಂಧಿಸಿದ ವಾರ್ಡನ್ ರವರಿಗೆ ಸಲ್ಲಿಸಬೇಕು. ವೆಬ್‌ಸೈಟ್ ವಿಳಾಸ: https://swdservices.karnataka.gov.in/swdhmis/ ಹೆಚ್ಚಿನ ಮಾಹಿತಿಗಾಗಿ 08192-295031, 9480843117 ಸಂಪರ್ಕಿಸಿ

### ಪಡಿತರ ಹಂಚಿಕೆ

» **ದಾವಣಗೆರೆ**

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಜೂನ್ ಮಾಹೆಗೆ ಅನ್ವಯವಾಗುವಂತೆ ಪಡಿತರ ಧಾನ್ಯ ಹಂಚಿಕೆ ಮಾಡಲಾಗಿದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ ಪ್ರತಿ ಕಾರ್ಡ್‌ಗೆ 21 ಕೆ.ಜಿ ಅಕ್ಕಿ, ರಾಗಿ ಪ್ರತಿ ಕಾರ್ಡ್‌ಗೆ 14 ಕೆ.ಜಿ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3 ಕೆ.ಜಿ ಅಕ್ಕಿ, ರಾಗಿ 2 ಕೆ.ಜಿ ಉಚಿತವಾಗಿ ವಿತರಿಸಲಾಗುತ್ತದೆ.

ಸರ್ಕಾರದ ಗ್ಯಾರಂಟಿ ಯೋಜನೆಯಡಿ ಪಡಿತರ ಚೀಟಿದಾರರಿಗೆ ನೇರ ನಗದು ವರ್ಗಾವಣೆ ಮಾಡುತ್ತಿದ್ದು, ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಹತ್ತಿರದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಪರಿಹರಿಸಿಕೊಳ್ಳಬಹುದೆಂದು ತಹಶೀಲ್ದಾರ್ ಡಾ.ಎಂ.ಬಿ.ಅಶ್ವಥ್ ತಿಳಿಸಿದ್ದಾರೆ.

# ನಿತ್ಯದ ಬದುಕಿನಲ್ಲಿ ಸಕಾರಾತ್ಮಕ ಚಿಂತನೆಗಳಿರಲಿ

» **ದಾವಣಗೆರೆ**



ಪ್ರತಿಯೊಬ್ಬರ ಆಲೋಚನೆಗಳಲ್ಲಿ ದಿನಕ್ಕೆ 40 ರಿಂದ 80 ಸಾವಿರದವರೆಗೆ ಆಲೋಚನೆಗಳು ಮನಸಿನಲ್ಲಿ ಮೂಡಲಿದ್ದು ಇದರಲ್ಲಿ ಸಕಾರಾತ್ಮಕ ಚಿಂತನೆಗಳನ್ನು ಆಯ್ದುಕೊಂಡಾಗ ಮಾತ್ರ ದಿನದ ಬದುಕಿನಲ್ಲಿ ಒತ್ತಡ ಮುಕ್ತರಾಗಿ ಲವಲಿಕೆಯಿಂದ ಇರಬಹುದೆಂದು ಮನೋಶಾಸ್ತ್ರಜ್ಞ ಡಾ; ಸುಭಾಷ್ ಚಂದ್ರನ್ ತಿಳಿಸಿದರು.

ನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಕಾರ್ಯ ಒತ್ತಡ ನಿರ್ವಹಣೆ ಬಗ್ಗೆ ಒಂದು ದಿನದ ಕಾರ್ಯಾಗಾರದಲ್ಲಿ ಪೊಲೀಸ್ ಕರ್ತವ್ಯದ ಸಮಯದಲ್ಲಿ ಹಾಗೂ ವೈಯುಕ್ತಿಕ ಜೀವನದಲ್ಲಿ ಹೇಗೆ ಕಾರ್ಯ ಒತ್ತಡ ನಿರ್ವಹಣೆ ಮಾಡುವ ಬಗ್ಗೆ ಉಪನ್ಯಾಸ ನೀಡಿದರು.

ಮನುಷ್ಯನಿಗೆ ಮಲಗಿ ಎದ್ದಾಗಿನಿಂದ ಮತ್ತೆ ರಾತ್ರಿ ಮಲಗುವವರೆಗೂ ಅನೇಕ ಚಿಂತನೆಗಳು ಬರಲಿವೆ. ಇದರಲ್ಲಿ ಕರ್ತವ್ಯದ ಸ್ಥಳ ಇರಬಹುದ, ಕುಟುಂಬದ ಮತ್ತು ನೆರೆಹೊರೆಯವರ ಹಾಗೂ ಸಂಬಂಧಿಕರ ಬಗ್ಗೆ ಆಲೋಚಗಳು ಮೂಡುತ್ತವೆ. ಇವುಗಳಲ್ಲಿ ಕೆಲವು ಭಾವನಾತ್ಮಕ, ಕೆಲವು ಸಂತೋಷ, ದುಖಃ, ಕರುಣೆ, ಪ್ರೀತಿ, ಭಕ್ತಿ ಸೇರಿದಂತೆ ಅನೇಕ ಭಾವವಿಕಾರಗಳು ಮೂಡಲಿವೆ. ಆದರೆ ಇವುಗಳಲ್ಲಿ ಯಾವು ಸಕಾರಾತ್ಮಕವೋ ಅಂತಹ ಆಲೋಚನೆಗಳನ್ನು ಮಾತ್ರ ಪರಿಗಣಿಸಿ ನಕಾರಾತ್ಮಕ ಚಿಂತನೆಗಳನ್ನು ಕೈಬಿಡಬೇಕು. ಕೆಲವು ಸಂದರ್ಭದಲ್ಲಿ ಮಕ್ಕಳ ಬಗ್ಗೆ ಚಿಂತನೆ ಮಾಡಿ ಇತರೆಯವರಿಗೆ ಹೋಲಿಕೆ ಮಾಡುವುದುಂಟು, ಆದರೆ ಸಾಮಥ್ಯವನ್ನು ಹೆಚ್ಚಿಸಲು ಪ್ರಯತ್ನಪಡುವ ನಿಟ್ಟಿನಲ್ಲಿ ಏನು ಮಾಡಬೇಕೆಂಬ ಆಲೋಚನೆ ಬಹಳ ಮುಖ್ಯವಾಗಿರುತ್ತದೆ ಎಂದರು.

ಒತ್ತಡಗಳಲ್ಲಿ ಕೆಲಸ ಮಾಡುವ ಸ್ಥಳಗಳಲ್ಲಿ ಒತ್ತಡಗಳನ್ನು ತಲೆಬಾರವಾಗಿ ತೆಗೆದುಕೊಳ್ಳದೇ ಎಲ್ಲಾ ಕೆಲಸಗಳನ್ನು ಸೂಕ್ಷ್ಮವಾಗಿ ಗಮನಿಸಿ ಸೂಕ್ಷ್ಮತೆಯಿಂದ ನಿರ್ವಹಣೆ ಮಾಡಿದಾಗ ಒತ್ತಡದ ಕೆಲಸಗಳನ್ನು ನಿರ್ವಹಿಸಲು ಸಾಧ್ಯವಾಗಲಿದೆ. ಒಟ್ಟಾರೆ ಸಕಾರಾತ್ಮಕ ಚಿಂತನೆಗಳು ಒತ್ತಡದ ಬದುಕಿನಿಂದ ಹೊರಬರಲು ಸಹಕಾರಿಯಾಗಲಿದೆ ಎಂದರು. ಕಾರ್ಯಗಾರದಲ್ಲಿ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಅಧ್ಯಕ್ಷತೆ ವಹಿಸಿ, ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆಯ ಪ್ರಯುಕ್ತ ಪ್ರತಿಜ್ಞಾ ವಿಧಿ ಭೋಧಿಸಿದರು.ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಸಂತೋಷ ಮಾತನಾಡಿ, ಪೊಲೀಸ್ ಕರ್ತವ್ಯದ ಸಮಯದಲ್ಲಿ ಹಲವಾರು ಒತ್ತಡಗಳಲ್ಲಿ ಅಂದರೆ ದೈಹಿಕವಾಗಿ, ಮಾನಸಿಕವಾಗಿ ಹಲವಾರು ಒತ್ತಡಗಳಲ್ಲಿ ಕಾರ್ಯನಿರ್ವಹಿಸಬೇಕಾಗಿರುತ್ತದೆ. ಜೊತೆಗೆ ವೈಯುಕ್ತಿಕ ಜೀವನವೂ ಕೂಡ ಬಹು ಮುಖ್ಯವಾಗಿರುತ್ತದೆ, ಇಂತಹ ಸಮಯದಲ್ಲಿ ಜೀವನ ಸಮತೋಲನವಾಗಿರಿಸಿಕೊಳ್ಳಲು ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯ ಕೂಡ ತುಂಬಾ ಮುಖ್ಯವಾಗಿರುತ್ತದೆ. ಆದ್ದರಿಂದ ಜಿಲ್ಲೆಯ ಪೊಲೀಸ್ ಅಧಿಕಾರಿ ಸಿಬ್ಬಂದಿಗಳಿಗೆ ಅನುಕೂಲವಾಗಲೆಂದು ಈ ಕಾರ್ಯಗಾರವನ್ನು ಏರ್ಪಡಿಸಿದ್ದು ಕಾರ್ಯಗಾರದ ಸದುಪಯೋಗ ಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಹೆಚ್ಚುವರಿ ಪೊಲೀಸ್ ಅಧೀಕ್ಷಕರುಗಳಾದ ಮಂಜುನಾಥ್, ನಗರ ಉಪ ವಿಭಾಗದ ಡಿವೈಎಸ್ಪಿ ಮಲ್ಲೇಶ್ ದೊಡ್ಡಮನಿ, ಪ್ರಶಾಂತ್ ಸಿದ್ದನಗೌಡರ್, ಉಜ್ಜನಿಕೊಪ್ಪ, ಬೆರಳು ಮುದ್ರೆ ಘಟಕದ ರುದ್ರೇಶ್ ಜಿಲ್ಲಾ ಪೊಲೀಸ್ ಕಚೇರಿಯ ಸಹಾಯಕ ಆಡಳಿತಾಧಿಕಾರಿ ಮೆಹಬೂಬ್ ಹಾಗೂ ಜಿಲ್ಲೆಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

## ಅಂಗನವಾಡಿ ಕಾರ್ಯಕರ್ತೆ ಹಾಗೂ ಮೇಲ್ವಿಚಾರಕಿಯರಿಗೆ ಸ್ಮಾರ್ಟ್ ಫೋನ್ ವಿತರಣೆ




» **ದಾವಣಗೆರೆ**

ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿ ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ವೃತ್ತದ ಮೇಲ್ವಿಚಾರಕಿಯರಿಗೆ ಕೇಂದ್ರ ಸರ್ಕಾರದ ಯೋಜನೆಯಾದ ರಾಷ್ಟ್ರೀಯ ಪೋಷಣ್ ಅಭಿಯಾನ (ಮಿಷನ್ 2.0) ಯೋಜನೆಯಡಿ ಸ್ಯಾಮ್‌ಸಾಂಗ್ ಗ್ಯಾಲಾಕ್ಸಿ 40.ಎಸ್ ಸ್ಮಾರ್ಟ್ ಫೋನ್‌ಗಳನ್ನು ವಿತರಿಸಲಾಗಿದೆ. ಈ ಫೋನ್‌ಮೂಲಕ ಅಂಗನವಾಡಿ ಕಾರ್ಯಕರ್ತೆಯರು ಪೋಷಣ್ ಟ್ರ್ಯಾಕರ್ ಆಪ್ ಮೂಲಕ ಪ್ರತಿ ದಿನ ಅಂಗನವಾಡಿ ಕೇಂದ್ರದ ದೈನಂದಿನ ಚಟುವಟಿಕೆಗಳಾದ ಮಕ್ಕಳ ಹಾಜರಾತಿ, ಶಾಲಾ ಪೂರ್ವ ಶಿಕ್ಷಣ, ಹಾಗೂ ಬಿಸಿ ಊಟ ವಿತರಣೆ ಮುಂತಾದವುಗಳನ್ನು ಪೋಷಣ್ ಟ್ರ್ಯಾಕರ್ ನಲ್ಲಿ ತಪ್ಪದೇ ಅಳವಡಿಸಲು ಬೇಕು. ಹಾಗೂ ಸರ್ಕಾರದಿಂದ ನೀಡಿರುವ ಸ್ಮಾರ್ಟ್ ಫೋನ್‌ಗಳನ್ನು ಸದ್ಬಳಕೆ ಮಾಡಿಕೊಂಡು ಇಲಾಖಾ ಮಾಹಿತಿಯನ್ನು ನಿರ್ವಹಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ನಿರೂಪಣಾಧಿಕಾರಿಗಳಾದ ರಾಜಕುಮಾರ್ ರಾಠೋಡ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ, ಅಭಿಕುಮಾರ್ ಜಿ.ಎಸ್, ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು, ಹಾಗೂ ಪೋಷಣೆ ಅಭಿಯಾನ ಯೋಜನೆಯ ಸಿಬ್ಬಂದಿಗಳು ಹಾಜರಿದ್ದರು.

# ಪಂಚಾಯತ್ ರಾಜ್, ಗ್ರಾಮೀಣಾಭಿವೃದ್ಧಿ ಕುರಿತು ಉಪನ್ಯಾಸ

» **ಚಿತ್ರದುರ್ಗ**

ದಾವಣಗೆರೆ ವಿಶ್ವವಿದ್ಯಾನಿಲಯ ಘಟಕ ಕಾಲೇಜು ತುರುವನೂರು ಪದವಿ ಕಾಲೇಜು ವತಿಯಿಂದ ಚಿತ್ರದುರ್ಗ ತಾಲ್ಲೂಕಿನ ಕೂನಬೇವು ಗ್ರಾಮದಲ್ಲಿ ನಡೆಯುತ್ತಿರುವ ಎನ್‌ಎಸ್‌ಎಸ್ ವಾರ್ಷಿಕ ಶಿಬಿರ ಕಾರ್ಯಕ್ರಮದಲ್ಲಿ ಪಂಚಾಯತ್ ರಾಜ್ ಮತ್ತು ಗ್ರಾಮೀಣ ಅಭಿವೃದ್ಧಿ ವಿಷಯ ಕುರಿತು ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಚಿತ್ರದುರ್ಗ ಸರ್ಕಾರಿ ಕಲಾ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಹಾಗೂ ಸಮಾಜಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಡಾ.ಸ.ರಾ.ಲೇಪಾಕ್ಷ




ಹಾಗೂ ಸಮಾಜಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಡಾ.ಸಿ.ಸುರೇಶ್ ಅವರು ಪಂಚಾಯತ್ ರಾಜ್ ಮತ್ತು ಗ್ರಾಮೀಣ ಅಭಿವೃದ್ಧಿ ವಿಷಯದ ಕುರಿತು ಉಪನ್ಯಾಸ ನೀಡಿದರು.

ತುರುವನೂರು ಪದವಿ ಕಾಲೇಜಿನ ಕನ್ನಡ ವಿಭಾಗದ ಬೋಧನಾ ಸಹಾಯಕ ಎಂ.ಅಶೋಕ್ ಕುಮಾರ್ ಅವರು, ಕೂನಬೇವು ಗ್ರಾಮದ ಹಳ್ಳಿಯ ಸ್ವಚ್ಛತೆ ಮತ್ತು ಶುಚಿತ್ವ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್ ಶಿಬಿರದ ಸಂಯೋಜನಾಧಿಕಾರಿ ವಿ.ಕೆ. ಸಂತೋಷ್ ಕುಮಾರ್, ಬೋಧನಾ ಸಹಾಯಕರಾದ ಕೆ.ಮಹೇಶ್, ಡಾ .ಕೆ.ಎನ್.ವಿಶ್ವನಾಥ್, ಬಿ.ಎನ್.ಶಿವಶಂಕರ್, ಅಧೀಕ್ಷಕ ಪಿ. ಮಂಜುನಾಥ ಹಾಗೂ ಬೋಧಕೇತರ ಸಿಬ್ಬಂದಿಯವರಾದ ಕೆ.ಸಿ.ಪ್ರದೀಪ್ ಕುಮಾರ್, ಎಂ.ಎಸ್.ಪವನ್ ಕುಮಾರ್, ಸಿ.ಧನಂಜಯ ಇದ್ದರು.

## ದಾವಣಗೆರೆ ಮಹಾನಗರಪಾಲಿಕೆ ಆಸ್ತಿ ತೆರಿಗೆ ಪಾವತಿಸಿ ಶೇ 5 ರಷ್ಟು ರಿಯಾಯಿತಿ ಪಡೆಯಿರಿ

» **ದಾವಣಗೆರೆ**

ಪ್ರಸಕ್ತ ಸಾಲಿನ ಆಸ್ತಿ ತೆರಿಗೆ ಪಾವತಿಸಲು ಏಪ್ರಿಲ್ 2024 ರಿಂದ ಪ್ರಾರಂಭವಾಗಿದ್ದು ಸಕಾಲದಲ್ಲಿ ಪಾವತಿಸಿದವರಿಗೆ ಆಸ್ತಿ ತೆರಿಗೆಯ ಮೇಲೆ ಶೇ.5 ರಷ್ಟು ರಿಯಾಯತಿ ನೀಡುವ ಸೌಲಭ್ಯವನ್ನು ಜುಲೈ 31 ರವರೆಗೆ ವಿಸ್ತರಿಸಲಾಗಿದೆ. ಸ್ವತ್ತಿಗೆ ಸಂಬಂಧಿಸಿದ ಆಸ್ತಿ ತೆರಿಗೆಯನ್ನು ಕೂಡಲೇ ಪಾವತಿಸಿ ಶೇ.5 ರ ರಿಯಾಯಿತಿಯ ಸದುಪಯೋಗವನ್ನು ಪಡೆದುಕೊಳ್ಳಬೇಕು. ಆಸ್ತಿ ತೆರಿಗೆ ಪಾವತಿಸಿಕೊಳ್ಳುವ ಸ್ಥಳ: ವಲಯ ಕಚೇರಿ-1, ಮಹಾನಗರಪಾಲಿಕೆ, ರಾಜೀವಗಾಂಧಿ ಬಡಾವಣೆ, ಬೂದಾಳ್ ರಸ್ತೆ ದಾವಣಗೆರೆ. ವಲಯ ಕಚೇರಿ-2, ಮಹಾನಗರಪಾಲಿಕೆ, ಲೋಕಿಕೆರೆ ರಸ್ತೆ, ಟಿವಿ ಸ್ಟೇಷನ್ ಎದುರು ದಾವಣಗೆರೆ, ವಲಯ ಕಚೇರಿ-3, ಮಹಾನಗರಪಾಲಿಕೆ, ಆಶ್ರಯ ಆಸ್ಪತ್ರೆ ಪಕ್ಕ ದಾವಣಗೆರೆ, ಸಾರ್ವಜನಿಕರು ವೆಬ್ ಸೈಟ್ http://davanagerecitycorp.org ಲಿಂಕ್‌ನ್ನು ಉಪಯೋಗಿಸಿಕೊಂಡು ಮತ್ತು ಗೂಗಲ್ ಪೇ, ಫೋನ್ ಪೇ, ನಗದು, ಚೆಕ್ ಮುಖಾಂತರವೂ ಸಹ ಆಸ್ತಿ ತೆರಿಗೆ ಪಾವತಿಸಬಹುದೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ನೂತನ ಚೆಕ್‌ಡ್ಯಾಂಗೆ ಶಾಸಕ ಡಾ.ಎಂ.ಚಂದ್ರಪ್ಪ ಭೂಮಿ ಪೂಜೆ

» **ಹೊಳಲ್ಕೆರೆ**

ಒಂದು ಹನಿ ನೀರು ವ್ಯರ್ಥವಾಗಿ ಹರಿದು ಹೋಗಬಾರದೆಂದು ಆರುವರೆ ಕೋಟಿ ರೂ.ವೆಚ್ಚದಲ್ಲಿ ಚೆಕ್‌ಡ್ಯಾಂಗಳನ್ನು ಕಟ್ಟಿಸಲಾಗುತ್ತಿದೆ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಹೊಳಲ್ಕೆರೆ ತಾಲ್ಲೂಕಿನ ಅಂದನೂರು ಗ್ರಾಮದಲ್ಲಿ ನೂತನ ಚೆಕ್‌ಡ್ಯಾಂ ನಿರ್ಮಾಣ ಕಾಮಗಾರಿಗೆ ಬುಧವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಕಳೆದ ವರ್ಷ ಮಳೆ ಕೈಕೊಟ್ಟಿದ್ದರಿಂದ ರೈತರು ತೋಟಗಳನ್ನು ಉಳಿಸಿಕೊಳ್ಳಲು ಕಷ್ಟಪಟ್ಟಿದ್ದನ್ನು ಕಣ್ಣಾರೆ ಕಂಡಿದ್ದೇನೆ. ನನಗೂ ನೂರಾರು ಎಕರೆ ತೋಟವಿರುವುದರಿಂದ ರೈತರ ಕಷ್ಟ ಏನೆಂಬುದು ಗೊತ್ತಿದೆ. ಈಗಾಗಲೆ



ನಲವತ್ತು ಕೋಟಿ ರೂ.ಗಳನ್ನು ಖರ್ಚು ಮಾಡಿ ಈ ಭಾಗದಲ್ಲಿ ಚೆಕ್‌ಡ್ಯಾಂಗಳನ್ನು ಕಟ್ಟಲಾಗಿದೆ. ಕೆರೆ ಹತ್ತಿರ ಒಂದು ಸಣ್ಣ ಬ್ರಿಡ್ಜ್ ಇದೆ. ಯಾರಿಗೂ ಗೊತ್ತಾಗುವುದಿಲ್ಲ. ಎರಡುವರೆಯಿಂದ ಮೂರು ಕೋಟಿ ರೂ.ಗಳನ್ನು ಖರ್ಚು ಮಾಡಿ ಗುಣಮಟ್ಟದ ರಸ್ತೆ ನಿರ್ಮಿಸಲಾಗಿದೆ ಎಂದು ತಿಳಿಸಿದರು.

ಸರ್ಕಾರದಿಂದ ಹಣ ಮಂಜೂರು ಮಾಡಿಸುವುದು ನನ್ನ ಕೆಲಸ. ಆದರೆ ಇಂಜಿನಿಯರ್, ಸೂಪರ್‌ವೈಸರ್‌ಗಳು ಸರಿಯಾಗಿ ಕೆಲಸ ಮಾಡುತ್ತಾರೋ ಇಲ್ಲವೋ ಎನ್ನುವುದನ್ನು ಗ್ರಾಮಸ್ಥರಾದ ನೀವುಗಳು ಗಮನಿಸಿ ಎಲ್ಲಿಯಾದರೂ ಲೋಪಗಳು ಕಂಡು ಬಂದಲ್ಲಿ ಎಚ್ಚರಿಸುತ್ತಿರಬೇಕು. ಮೂವತ್ತು ವರ್ಷಗಳಿಂದ ಶಾಸಕನಾಗಿದ್ದೇನೆ. ಅಧಿಕಾರ ಶಾಶ್ವತವಲ್ಲ. ಇರುವಷ್ಟು ದಿನ ಹತ್ತಾರು ಜನ ಮೆಚ್ಚುವ ರೀತಿಯಲ್ಲಿ ಕೆಲಸ ಮಾಡಬೇಕೆನ್ನುವುದನ್ನು ಮನದಲ್ಲಿಟ್ಟುಕೊಂಡು ಕ್ಷೇತ್ರದಲ್ಲಿ ಯಾರು ಏನೇ ಕೇಳಲಿ ಬಿಡಲಿ. ಎಲ್ಲೆಲ್ಲಿ ಏನೇನು ಅವಶ್ಯಕತೆಯಿದೆ ಎನ್ನುವುದನ್ನು ನೋಡಿ ಅಭಿವೃದ್ದಿ ಕೆಲಸ ಮಾಡಿ ನಿಮ್ಮಗಳ ಋಣ ತೀರಿಸುವುದು ನನ್ನ ಕರ್ತವ್ಯ ಎಂದರು.

ಬಿಜೆಪಿ. ಮಂಡಲ ಅಧ್ಯಕ್ಷ ಸಿದ್ದೇಶ್, ಬಸಪ್ಪ, ಮಹೇಶಪ್ಪ, ರುದ್ರಣ್ಣ, ತಿಮ್ಮಣ್ಣ, ಜಯಣ್ಣ, ಮುದ್ದಪ್ಪ, ಪ್ರವೀಣ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ನಾಗರಾಜ್, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಗ್ರಾಮದ ಮುಖಂಡರು ಈ ಸಂದರ್ಭದಲ್ಲಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T